Volume : 11 Issue : 137 | ಪುಟ : 4+2 | ಬೆಲೆ: 3.00 | ಗುರುವಾರ ಜುಲೈ 2-2026 | Mob : 9448326533- 9019256545 | ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 137 Pages : 4+2 Price : 3.00 Thursday July 2-2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದು ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಡಾ. ಫ.ಗು. ಹಳಕಟ್ಟಿಯವರ ಜನ್ಮದಿನದ ಅಂಗವಾಗಿ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ–2026 ಕಾರ್ಯಕ್ರಮವನ್ನು ಜುಲೈ 2ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದಲ್ಲಿ ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಘನ ಉಪಸ್ಥಿತಿ ವಹಿಸಲಿದ್ದು, ಗದಗ ಶಾಸಕ ಡಾ. ಎಚ್.ಕೆ. ಪಾಟೀಲ ಉದ್ಘಾಟನೆ ನೆರವೇರಿಸಿ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸಲೀಂ ಅಹ್ಮದ್, ಜಿ.ಎಸ್. ಪಾಟೀಲ, ಬಸವರಾಜ ಬೊಮ್ಮಾಯಿ, ಪಿ.ಸಿ. ಗದ್ದಿಗೌಡರ, ಡಿ.ಆರ್. ಪಾಟೀಲ, ಸಿ.ಸಿ. ಪಾಟೀಲ, ಡಾ. ಚಂದ್ರು ಲಮಾಣಿ, ಎಸ್.ವಿ. ಸಂಕನೂರ, ಪ್ರದೀಪ್ ಶೆಟ್ಟರ, ಅಕ್ಬರಸಾಬ ಬಬರ್ಜಿ, ಬಿ.ಬಿ. ಅಸೂಟಿ ಹಾಗೂ ಅಶೋಕ ಮಂದಾಲಿ ಭಾಗವಹಿಸಲಿದ್ದಾರೆ. ವಿಶೇಷ ಆಹ್ವಾನಿತರಾಗಿ ಡಾ. ಎಂ.ವಿ. ವೆಂಕಟೇಶ ಹಾಗೂ ಜಾನಕಿ ಕೆ.ಎಂ. ಆಗಮಿಸಲಿದ್ದು, ಶರಣತತ್ವ ಚಿಂತಕ ಅಶೋಕ ಬರಗುಂಡಿ ವಿಶೇಷ ಉಪನ್ಯಾಸ ನೀಡಲಿದ್ದಾರೆ.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್. ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ವ್ಹಿ. ಬಳ್ಳಾರಿ ಸಾರ್ವಜನಿಕರನ್ನು ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಆಹ್ವಾನಿಸಿದ್ದಾರೆ.

# ಉಭಯ ಗುರುಗಳ ಸೇವೆ ಸಮಾಜಕ್ಕೆ ದಾರಿದೀಪ

## ಸಮಾಜದ ಅಂಚಿನಲ್ಲಿದ್ದ ಮಕ್ಕಳಿಗೆ ಬದುಕಿನ ಬೆಳಕು ನೀಡಿದ ಮಹನೀಯರನ್ನು ಸ್ಮರಿಸಿದ ಎಸ್.ವಿ. ಸಂಕನೂರ

**ವಿಜಯಸಾಕ್ಷಿ ಸುದ್ದಿ, ಗದಗ**

ಸಮಾಜಕ್ಕಾಗಿ ಬದುಕಿದವರನ್ನು ಸಮಾಜ ಎಂದಿಗೂ ಮರೆಯುವುದಿಲ್ಲ. ಅಂಧರು, ಅನಾಥರು ಹಾಗೂ ಸಮಾಜದ ಅಂಚಿನಲ್ಲಿದ್ದ ಮಕ್ಕಳಿಗೆ ಆಶ್ರಯ ನೀಡಿ, ಶಿಕ್ಷಣ, ಸಂಗೀತ ಮತ್ತು ಬದುಕಿನ ಭದ್ರ ಬುನಾದಿ ಹಾಕಿದ ಉಭಯ ಗುರುಗಳ ಸೇವೆ ಇಂದಿಗೂ ಸಮಾಜಕ್ಕೆ ಮಾದರಿಯಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಹೇಳಿದರು.

ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಬುಧವಾರ ನಡೆದ ಲಿಂ. ಪಂ. ಪಂಚಾಕ್ಷರಿ ಗವಾಯಿಗಳವರ 82ನೇ ಪುಣ್ಯಾರಾಧನೆ ಹಾಗೂ ಲಿಂ. ಡಾ. ಪಂ. ಪುಟ್ಟರಾಜ ಗವಾಯಿಗಳವರ 16ನೇ ಪುಣ್ಯಾರಾಧನೆ ಮತ್ತು ಸಂಗೀತ ಸಮಾರಾಧನೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪುಟ್ಟರಾಜ ಗವಾಯಿಗಳವರು ಅಂಧರಾಗಿದ್ದರೂ ತ್ರಿಭಾಷಾ ಪಂಡಿತರಾಗಿ ಸುಮಾರು 60ಕ್ಕೂ ಹೆಚ್ಚು ಕೃತಿಗಳನ್ನು ರಚಿಸಿದ್ದರು. ಸಂಗೀತ, ಸಾಹಿತ್ಯ, ಪುರಾಣ, ನಾಟಕ ಹಾಗೂ ಶಿಕ್ಷಣ ಕ್ಷೇತ್ರಗಳಲ್ಲಿ ಅವರು



ಸಲ್ಲಿಸಿದ ಸೇವೆ ಅಪಾರವಾಗಿದೆ. 16ಕ್ಕೂ ಹೆಚ್ಚು ವಾದ್ಯಗಳನ್ನು ನುಡಿಸುವ ಅಪರೂಪದ ಪ್ರತಿಭೆ ಅವರಲ್ಲಿತ್ತು. ಅವರ ಸೇವೆಯನ್ನು ಗುರುತಿಸಿ ಕೇಂದ್ರ ಹಾಗೂ ವಿವಿಧ ರಾಜ್ಯ ಸರ್ಕಾರಗಳು ಅನೇಕ ಪ್ರಶಸ್ತಿಗಳನ್ನು ನೀಡಿವೆ. ಇಂತಹ ಮಹಾನ್ ಸಾಧಕರಿಗೆ ಭಾರತ ರತ್ನ ಪ್ರಶಸ್ತಿಯೇ ಸೂಕ್ತ ಗೌರವವಾಗಿತ್ತು. ಮುಂದಿನ ದಿನಗಳಲ್ಲಿ ಆ ಗೌರವ ದೊರೆಯುವ ವಿಶ್ವಾಸವಿದೆ ಎಂದು ಸಂಕನೂರ ಹೇಳಿದರು.

ಅಯೋಧ್ಯೆಯ ರಾಮ ಮಂದಿರದ ದೇಣಿಗೆ ಹಣ ದುರ್ಬಳಕೆ ಕುರಿತು ಕೇಳಿಬರುತ್ತಿರುವ ಆರೋಪಗಳು ಹಿಂದೂ ಸಮಾಜಕ್ಕೆ ಕಪ್ಪು ಚುಕ್ಕೆಯಂತಿವೆ. ಯಾವುದೇ ದೇವಸ್ಥಾನ ಅಥವಾ ಧಾರ್ಮಿಕ ಕೇಂದ್ರಗಳಲ್ಲಿ ಇಂತಹ ಘಟನೆಗಳು ಮರುಕಳಿಸಬಾರದು. ಜಾತ್ರೆಗಳು ಸಮಾಜದಲ್ಲಿ ಸೌಹಾರ್ದ, ಸಹಬಾಳ್ವೆ ಮತ್ತು ಜಾತ್ಯಾತೀತ ಮನೋಭಾವ ಬೆಳೆಸುವ ವೇದಿಕೆಗಳಾಗಬೇಕು ಎಂದು ಅವರು ಅಭಿಪ್ರಾಯಪಟ್ಟರು.

ಕೀರ್ತನ ಸಮ್ಮೇಳನದ ದಿವ್ಯ ಸಾನ್ನಿಧ್ಯವನ್ನು ಬಾಳೆಹೊನ್ನೂರಿನ ಶ್ರೀ ರಂಭಾಪುರಿ ಮಹಾಪೀಠದ ಶ್ರೀಮದ್ ರಂಭಾಪುರಿ ಜಗದ್ಗುರು ಪ್ರಸನ್ನ ರೇಣುಕ ವೀರಸೋಮೇಶ್ವರ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರು ವಹಿಸಿದ್ದರು.

> ಸಮಾಜದ ಅಂಚಿನಲ್ಲಿದ್ದ ಅಂಧ–ಅನಾಥ ಮಕ್ಕಳಿಗೆ ಬದುಕು ಕಟ್ಟಿಕೊಟ್ಟ ಉಭಯ ಗುರುಗಳ ಸೇವೆ ಇತಿಹಾಸದಲ್ಲಿ ಅಚ್ಚಳಿಯದ ಗುರುತು. ಇಂತಹ ಮಹನೀಯರ ಆದರ್ಶವೇ ಮುಂದಿನ ಪೀಳಿಗೆಗೆ ದಾರಿದೀಪ.
>
> **–ಎಸ್.ವಿ. ಸಂಕನೂರ,**
> ವಿಧಾನ ಪರಿಷತ್ ಸದಸ್ಯ

ಅಧ್ಯಕ್ಷತೆಯನ್ನು ಎಮ್ಮಿಗನೂರಿನ ಪೂಜ್ಯ ಶ್ರೀ ವಾಮದೇವ ಮಹಾಂತ ರಾಜದೇಶಿಕೇಂದ್ರ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸಿದ್ದರು. ಚಳಗೇರಿ ಹಿರೇಮಠದ ಪೂಜ್ಯ ಶ್ರೀ ವೀರ ಸಂಗಮೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ನೇತೃತ್ವ ವಹಿಸಿದ್ದರು.

ನೆಗಳೂರು ಸಂಸ್ಥಾನ ಹಿರೇಮಠದ ಪೂಜ್ಯ ಶ್ರೀ ಗುರುಶಾಂತೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು, ಹೂವಿನ ಹಡಗಲಿಯ ಪೂಜ್ಯ ಶ್ರೀ ಡಾ. ಹಿರಿಯ ಶಾಂತವೀರ ಮಹಾಸ್ವಾಮಿಗಳು, ಮೈನಹಳ್ಳಿ–ಬಿಕನಹಳ್ಳಿಯ ಪೂಜ್ಯ ಶ್ರೀ ಸಿದ್ದೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು, ನರೇಗಲ್–ಸವದತ್ತಿಯ ಪೂಜ್ಯ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯ ಮಹಾಸ್ವಾಮಿಗಳು, ಅಡ್ನೂರ–ರಾಜೂರ–ಗದಗ ಬ್ರಹನ್ಮಠದ ಪೂಜ್ಯ ಶ್ರೀ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು ಹಾಗೂ ಅಲಮೇಲದ ಪೂಜ್ಯ ಶ್ರೀ ಚಂದ್ರಶೇಖರ ಶಿವಾಚಾರ್ಯರು ಸಮ್ಮುಖ ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ಸೋಲ್ ಟ್ರಸ್ಟ್ ಅಧ್ಯಕ್ಷ ನಿಂಗಪ್ಪ ಕೆಂಗಾರ, ಚಂದ್ರು ಬಾಳಿಹಳ್ಳಿಮಠ, ಮಹೇಶ ಶಾಬಾದಿಮಠ, ವಿ.ಎಸ್. ಮಾಳೇಕೊಪ್ಪಮಠ, ಹೇಮರಾಜ ಶಾಸ್ತ್ರಿ ಹಿರೇಮಠ, ಸೋಲ್ ಟ್ರಸ್ಟ್ ಸದಸ್ಯ ಪರಶುರಾಮ ಕಟ್ಟಿಮನಿ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

ಈ ವೇಳೆ ಜಗದ್ಗುರುಗಳ ಸಾನ್ನಿಧ್ಯದಲ್ಲಿ ವೀರೇಶ್ವರ ಪುಣ್ಯಾಶ್ರಮದ ನೂತನ ವೆಬ್‌ಸೈಟ್ ಹಾಗೂ ಲೋಗೋವನ್ನು ಲೋಕಾರ್ಪಣೆ ಮಾಡಲಾಯಿತು.

# ಹೆತ್ತವರ ಮಹತ್ವ ಮರೆತರೆ ಮಹಾವಿನಾಶ!

## ವೃದ್ಧಾಶ್ರಮಗಳ ಹೆಚ್ಚಳ ಆತಂಕಕಾರಿ ಎಂದ ಸಭಾಪತಿ ಬಸವರಾಜ ಹೊರಟ್ಟಿ

**ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಹೆತ್ತವರನ್ನು ಗೌರವಿಸದ ಹಾಗೂ ವೃದ್ಧಾಪ್ಯದಲ್ಲಿ ಅವರನ್ನು ನಿರ್ಲಕ್ಷಿಸುವ ಮಕ್ಕಳು ತಮ್ಮ ಜೀವನದಲ್ಲಿಯೇ ಅದರ ದುಷ್ಪರಿಣಾಮ ಅನುಭವಿಸಬೇಕಾಗುತ್ತದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಎಚ್ಚರಿಕೆ ನೀಡಿದರು.

ಪಟ್ಟಣದ ಜಗದ್ಗುರು ಅನ್ನದಾನೇಶ್ವರ ಸಂಸ್ಥಾನ ಮಠ ಹಾಗೂ ಅವ್ವ ಸೇವಾ ಟ್ರಸ್ಟ್ (ಹುಬ್ಬಳ್ಳಿ) ಸಂಯುಕ್ತ ಆಶ್ರಯದಲ್ಲಿ ನಡೆದ ಅವ್ವ ಸೇವಾ ಟ್ರಸ್ಟ್ ದತ್ತಿ ನಿಧಿ ಕಾರ್ಯಕ್ರಮ, ಮಾಸಿಕ ಶಿವಾನುಭವ ಹಾಗೂ ಅಕ್ಕನ ಬಳಗದ 50ನೇ ವರ್ಷದ ಸುವರ್ಣ ಮಹೋತ್ಸವದಲ್ಲಿ ಅವರು ಮಾತನಾಡಿದರು.

ತಾಯಿ ತನ್ನ ಮಕ್ಕಳಿಗಾಗಿ ಸರ್ವಸ್ವವನ್ನೇ ತ್ಯಾಗ ಮಾಡಿ ಉತ್ತಮ ಶಿಕ್ಷಣ ನೀಡಿ ಬದುಕು ಕಟ್ಟಿಕೊಡುತ್ತಾಳೆ. ಆದರೆ ಅದೇ ಮಕ್ಕಳು ವೃದ್ಧಾಪ್ಯದಲ್ಲಿ ತಂದೆ–ತಾಯಿಯನ್ನು ಕಡೆಗಣಿಸುತ್ತಿರುವುದು ಸಮಾಜದ ದೊಡ್ಡ ದುರಂತವಾಗಿದೆ. ವೃದ್ಧಾಶ್ರಮಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿರುವುದು ಅತ್ಯಂತ ಕಳವಳಕಾರಿ ಬೆಳವಣಿಗೆ ಎಂದು ಅವರು ವಿಷಾದ ವ್ಯಕ್ತಪಡಿಸಿದರು.

ತಮ್ಮ ತಾಯಿಯ ಹೆಸರಿನಲ್ಲಿ ಆರಂಭಿಸಿರುವ ಅವ್ವ ಸೇವಾ ಟ್ರಸ್ಟ್ ಮೂಲಕ ಬಡ ಮಕ್ಕಳ ಶಿಕ್ಷಣಕ್ಕೆ ನೆರವು, ಸಾಧಕರಿಗೆ ಗೌರವ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ



ಸೇರಿದಂತೆ ಹಲವು ಸಮಾಜಮುಖಿ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ಇಡೀ ನಾಡಿನ ತಾಯಂದಿರಿಗೆ ಗೌರವ ಸಲ್ಲಿಸುವುದೇ ಟ್ರಸ್ಟ್‌ನ ಪ್ರಮುಖ ಉದ್ದೇಶ ಎಂದು ಹೇಳಿದರು.

ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರ ಮತ್ತು ಸಂಸ್ಕೃತಿಯನ್ನು ಕಲಿಸುವ ಜವಾಬ್ದಾರಿ ತಾಯಂದಿರ ಮೇಲಿದೆ. ಮಹಿಳೆಯರ ಮೇಲಿನ ಶೋಷಣೆ, ಅನ್ಯಾಯ ಮತ್ತು ತಾರತಮ್ಯ ತಡೆಯಲು ಸರ್ಕಾರ ಇನ್ನಷ್ಟು ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

> ಒಬ್ಬ ತಾಯಿ ಹತ್ತಾರು ಮಕ್ಕಳನ್ನು ಸಾಕುತ್ತಾಳೆ. ಆದರೆ ಹತ್ತಾರು ಮಕ್ಕಳು ಒಬ್ಬ ತಾಯಿಯನ್ನು ನೋಡಿಕೊಳ್ಳದ ಸ್ಥಿತಿ ನಿರ್ಮಾಣವಾಗಿದೆ. ಹೆತ್ತವರ ಕಣ್ಣೀರಿಗೆ ಕಾರಣವಾದವರಿಗೆ ವಿನಾಶ ತಪ್ಪದು.
>
> **–ಬಸವರಾಜ ಹೊರಟ್ಟಿ,**
> ಸಭಾಪತಿ

ಜಗದ್ಗುರು ನಾಡೋಜ ಡಾ. ಅನ್ನದಾನೇಶ್ವರ ಶ್ರೀಗಳು ಆಶೀರ್ವಚನ ನೀಡಿ, ಬಸವರಾಜ ಹೊರಟ್ಟಿ ಅವರು ನಾಲ್ಕೂವರೆ ದಶಕಗಳಿಂದ ಶಿಕ್ಷಕರ ಕಲ್ಯಾಣ ಹಾಗೂ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಸಲ್ಲಿಸಿರುವ ಸೇವೆ ಶ್ಲಾಘನೀಯ ಎಂದರು. ಸಮಾಜಮುಖಿ ಸೇವೆ ಸಲ್ಲಿಸುತ್ತಿರುವ ಮಠಗಳಿಗೆ ಸರ್ಕಾರ ಹೆಚ್ಚಿನ ಪ್ರೋತ್ಸಾಹ ನೀಡಬೇಕು ಎಂದು ಒತ್ತಾಯಿಸಿದರು.

ಅವ್ವ ಸೇವಾ ಟ್ರಸ್ಟ್ ಕಾರ್ಯದರ್ಶಿ ಶಶಿ ಸಾಲಿ ಹಾಗೂ ಗದಗ ಜಿಲ್ಲಾ ಸಂಚಾಲಕ ಡಾ. ಬಸವರಾಜ ಧಾರವಾಡ ಟ್ರಸ್ಟ್‌ನ ಸಮಾಜಮುಖಿ ಕಾರ್ಯಗಳ ಕುರಿತು ಮಾತನಾಡಿದರು.

ಕಾರ್ಯಕ್ರಮದಲ್ಲಿ ಡಾ. ಚನ್ನಬಸವ ದೇವರು, ಡಾ. ಬಿ.ಜಿ. ಜವಳಿ, ಕೆ.ವಿ. ಹಂಚಿನಾಳ, ಜೆ.ಟಿ. ಸಾಲಿಮಠ, ಎಸ್.ಎಂ. ಅಗಡಿ, ಶಂಕರ್ ಕೊಲ್ಮಿ, ಜಿ.ಎಸ್. ಪಾಟೀಲ ಸೇರಿದಂತೆ ಹಲವರು ಉಪಸ್ಥಿತರಿದ್ದರು. ನಾಗಭೂಷಣ ಹಿರೇಮಠ ಸ್ವಾಗತಿಸಿ, ದೀಪುಶ್ರೀ ಕಣವಿ ಕಾರ್ಯಕ್ರಮ ನಿರೂಪಿಸಿದರು.

## ವೈದ್ಯರ ದಿನಾಚರಣೆಗೆ ಮಕ್ಕಳಿಂದ ವಿಶಿಷ್ಟ ಗೌರವ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ರಾಷ್ಟ್ರೀಯ ವೈದ್ಯರ ದಿನಾಚರಣೆ ಅಂಗವಾಗಿ ಪಟ್ಟಣದ ಎಂಜಿಎಂ ಪೂರ್ವ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ಮುಖ್ಯ ಶಿಕ್ಷಕಿ ದೀಪಾಲಿ ಪಾಟೀಲ ಅವರ ನೇತೃತ್ವದಲ್ಲಿ ಅಗಡಿ ಸನ್ ರೈಸ್ ಆಸ್ಪತ್ರೆಗೆ ಭೇಟಿ ನೀಡಿ ವೈದ್ಯರಿಗೆ ಶುಭಾಶಯ ಕೋರಿದರು.

ಈ ವೇಳೆ ವಿದ್ಯಾರ್ಥಿಗಳು ವೈದ್ಯರೊಂದಿಗೆ ಕೇಕ್ ಕತ್ತರಿಸಿ ವೈದ್ಯರ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಿದರು. ಸಮಾಜದ ಆರೋಗ್ಯ ಕಾಪಾಡುವಲ್ಲಿ ವೈದ್ಯರ ಸೇವೆ ಅಮೂಲ್ಯವಾಗಿದೆ ಎಂದು ಅಭಿನಂದಿಸಿದರು.

ಆಸ್ಪತ್ರೆಯ ವೈದ್ಯರು ಮಕ್ಕಳ ಶುಭಾಶಯವನ್ನು ಸ್ವೀಕರಿಸಿ, ಆರೋಗ್ಯದ ಬಗ್ಗೆ ಕಾಳಜಿ ವಹಿಸುವುದು, ಸ್ವಚ್ಛತೆ ಪಾಲಿಸುವುದು ಹಾಗೂ ಉತ್ತಮ ಜೀವನಶೈಲಿಯನ್ನು ಅಳವಡಿಸಿಕೊಳ್ಳುವಂತೆ ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಅಗಡಿ ಸನ್ ರೈಸ್ ಆಸ್ಪತ್ರೆಯ ವೈದ್ಯರು ಹಾಗೂ ಸಿಬ್ಬಂದಿ, ಎಂಜಿಎಂ ಪೂರ್ವ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕಿ ದೀಪಾಲಿ ಪಾಟೀಲ, ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಇಂದು ಸರ್ಕಾರಿ ನೌಕರರ ಸೇವಾ ನಿವೃತ್ತಿ ಅಭಿನಂದನಾ ಸಮಾರಂಭ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು, ಜಿಲ್ಲಾ ಶಾಖೆ ಗದಗ, ರಾಜ್ಯ ಖಜಾನೆ ಇಲಾಖೆ ಹಾಗೂ ಅರಣ್ಯ ಇಲಾಖೆ ನೌಕರರ ಸಂಘದ ಸಂಯುಕ್ತ ಆಶ್ರಯದಲ್ಲಿ ಸೇವಾ ನಿವೃತ್ತಿ ಅಭಿನಂದನಾ ಸಮಾರಂಭವನ್ನು ಜುಲೈ 2ರಂದು ಸಂಜೆ 5 ಗಂಟೆಗೆ ನಗರದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಮುದಾಯ ಭವನ, ಮುಳಗುಂದ ರಸ್ತೆಯಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷ ಹಾಗೂ ಗದಗ ಜಿಲ್ಲಾ ಅಧ್ಯಕ್ಷ ಡಾ. ಬಸವರಾಜ ಬಳ್ಳಾರಿ ವಹಿಸಲಿದ್ದಾರೆ. ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಡಿವೈಎಸ್ಪಿ ಮುರ್ತುಜಾ ಖಾದ್ರಿ, ಜಿಲ್ಲಾ ಖಜಾನೆ ಉಪನಿರ್ದೇಶಕ ವಿ. ಹರಿನಾಥ ಬಾಬು ಹಾಗೂ ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷಕುಮಾರ ಕೆಂಚಣ್ಣವರ ಭಾಗವಹಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಮಾಜಿ ಜಿಲ್ಲಾಧ್ಯಕ್ಷರಾದ ರವಿ ಎಲ್. ಗುಂಜೀಕರ ಹಾಗೂ ಪ್ರೇಮನಾಥ ಉಪಸ್ಥಿತರಿರುವರು.

ಈ ಸಂದರ್ಭದಲ್ಲಿ ಜಿಲ್ಲಾ ಸಂಘದ ಉಪಾಧ್ಯಕ್ಷ ಎಸ್.ಎಚ್. ಬಾದನಟ್ಟಿ ಹಾಗೂ ಜಂಟಿ ಕಾರ್ಯದರ್ಶಿ ಎನ್. ಜಯರಾಮ್ ಅವರ ಸೇವೆಯನ್ನು ಸ್ಮರಿಸಿ, ಸೇವಾ ನಿವೃತ್ತಿ ಅಭಿನಂದನೆ ಮತ್ತು ಸನ್ಮಾನ ಕಾರ್ಯಕ್ರಮ ನಡೆಯಲಿದೆ.

# ತ್ಯಾಗದ ಇತಿಹಾಸವೇ ಸಮಾಜದ ಶಕ್ತಿ

## 1921ರ ಮದ್ಯ ನಿಷೇಧ ಹೋರಾಟದ ಹುತಾತ್ಮರನ್ನು ಸ್ಮರಿಸಿದ ಜಿಲ್ಲಾಧಿಕಾರಿ ಸ್ನೇಹಲ್ ಆರ್.

**ವಿಜಯಸಾಕ್ಷಿ ಸುದ್ದಿ ಧಾರವಾಡ**

ಸಮಾಜದ ಒಳಿತಿಗಾಗಿ ಪ್ರಾಣವನ್ನೇ ಅರ್ಪಿಸಿದ ಮಹನೀಯರ ತ್ಯಾಗ ಮತ್ತು ಆದರ್ಶಗಳನ್ನು ಮುಂದಿನ ಪೀಳಿಗೆಗೆ ತಲುಪಿಸುವುದು ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಹೇಳಿದರು.

ನಗರದ ಜಕಣಿಬಾವಿ ರಸ್ತೆಯಲ್ಲಿರುವ ಹುತಾತ್ಮರ ವರ್ತುಲದ ಸ್ಮಾರಕಕ್ಕೆ ಬುಧವಾರ ಪುಷ್ಪನಮನ ಸಲ್ಲಿಸಿ ಮಾತನಾಡಿದ ಅವರು, 1921ರ ಜುಲೈ 1ರಂದು ಸಾರಾಯಿ (ಮದ್ಯ) ಮಾರಾಟ ನಿಷೇಧಕ್ಕೆ ಆಗ್ರಹಿಸಿ ನಡೆದ ಸ್ವಾತಂತ್ರ್ಯ ಹೋರಾಟದಲ್ಲಿ ಮಲ್ಲಿಕಸಾಬ್ ಬಿನ್ ಮರ್ದಾನಸಾಬ್, ಗೌಸುಸಾಬ್ ಬಿನ್ ಖಾದರಸಾಬ್ ಹಾಗೂ ಅಬ್ದುಲ್ ಗಫಾರ್ ಚೌಕತಾಯಿ ಗುಂಡೇಟಿಗೆ



ಬಲಿಯಾಗಿ ಹುತಾತ್ಮರಾಗಿದ್ದರು ಎಂದು ಸ್ಮರಿಸಿದರು.

ಸಮಾಜದ ಹಿತಕ್ಕಾಗಿ ವೈಯಕ್ತಿಕ ಬದುಕಿಗಿಂತ ಜನರ ಕಲ್ಯಾಣವನ್ನೇ ಮುಖ್ಯವೆಂದು ಪರಿಗಣಿಸಿ ಹೋರಾಡಿದ ಈ ಮೂವರು ಮಹನೀಯರ ಬಲಿದಾನ ಇತಿಹಾಸದಲ್ಲಿ ಅಜರಾಮರವಾಗಿದೆ. ಉತ್ತಮ ಸಮಾಜ ನಿರ್ಮಾಣಕ್ಕೆ ಅನೇಕ ಜನರ ತ್ಯಾಗ ಮತ್ತು ಬಲಿದಾನ ಅಗತ್ಯ ಎಂಬುದನ್ನು ಅವರ ಜೀವನವೇ ಸಾರುತ್ತದೆ. ಆದ್ದರಿಂದ ಅವರ ತ್ಯಾಗದ ಸಂದೇಶವನ್ನು ಮುಂದಿನ ಪೀಳಿಗೆಗೆ ಪರಿಚಯಿಸುವುದು ನಮ್ಮೆಲ್ಲರ ಹೊಣೆಗಾರಿಕೆ ಎಂದು ಜಿಲ್ಲಾಧಿಕಾರಿ ಹೇಳಿದರು.

> ಹುತಾತ್ಮರ ರಕ್ತದಿಂದ ಬರೆದ ಇತಿಹಾಸವನ್ನು ಮರೆಯಬಾರದು; ಅವರ ತ್ಯಾಗವೇ ಉತ್ತಮ ಸಮಾಜ ನಿರ್ಮಾಣದ ಅಡಿಪಾಯ.
>
> **– ಸ್ನೇಹಲ್ ಆರ್.**
> **ಜಿಲ್ಲಾಧಿಕಾರಿ**

ಪ್ರೊಬೆಷನರಿ ಐಎಎಸ್ ಅಧಿಕಾರಿ ಅನುಪ್ರಿಯಾ ಸಾಕ್ಯಾ ಮಾತನಾಡಿ, ಮದ್ಯ ನಿಷೇಧಕ್ಕಾಗಿ ಪ್ರಾಣ ತ್ಯಾಗ ಮಾಡಿದ ಹುತಾತ್ಮರ ಆದರ್ಶಗಳು ಇಂದಿಗೂ ಸಮಾಜಕ್ಕೆ ಸ್ಫೂರ್ತಿಯಾಗಿವೆ. ಅವರ ಬಲಿದಾನ ಮದ್ಯಮುಕ್ತ ಸಮಾಜ ನಿರ್ಮಾಣದ ಸಂಕಲ್ಪಕ್ಕೆ ಶಕ್ತಿಯಾಗಿದ್ದು, ಅವರ ಆದರ್ಶಗಳನ್ನು ಜೀವಂತವಾಗಿಡುವುದು ಅಗತ್ಯ ಎಂದು ಹೇಳಿದರು.

ಕಿರಿಯ ನ್ಯಾಯವಾದಿ ಬಸವಪ್ರಭು ಹೊಸಕೇರಿ ಮಾತನಾಡಿ, ಸಮಾಜದ ಒಳಿತಿಗಾಗಿ ಹೋರಾಡಿ ಹುತಾತ್ಮರಾದ ಈ ಮಹನೀಯರ ಸ್ಮರಣಾರ್ಥ ಪ್ರತಿವರ್ಷ ಹುತಾತ್ಮರ ದಿನಾಚರಣೆ ಆಚರಿಸಲಾಗುತ್ತಿದೆ. ಅವರ ತ್ಯಾಗ ಮತ್ತು ಆದರ್ಶಗಳನ್ನು ಯುವಪೀಳಿಗೆಗೆ ಪರಿಚಯಿಸುವ ಕೆಲಸ ನಿರಂತರವಾಗಿ ನಡೆಯಬೇಕು ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಕರ್ನಾಟಕ ವಿದ್ಯಾವರ್ಧಕ ಸಂಘದ ಕಾರ್ಯಾಧ್ಯಕ್ಷ ಶಂಕರ ಹಲಗತ್ತಿ, ಪ್ರಧಾನ ಕಾರ್ಯದರ್ಶಿ ರವೀಂದ್ರ ಆಕಳವಾಡಿ, ಧಾರವಾಡ ವಾಣಿಜ್ಯೋದ್ಯಮ ಸಂಘದ ಕಾರ್ಯದರ್ಶಿ ಸಂಗಮೇಶ್ವರಯ್ಯ ಲಿಂಬೆಣ್ಣದೇವರಮಠ, ಪಂಡಿತ ಮುಂಜಿ, ವೀರಣ್ಣ ಪತ್ತಾರ, ಚಂದ್ರಶೇಖರ ಅಮಿನಗಡ, ಶಶಿಧರ ನರೇಂದ್ರ, ಮಲ್ಲಿಕಾರ್ಜುನ ಚಿಕ್ಕಮಠ, ಕಾರ್ಯಕ್ರಮ ಸಂಘಟಕ ಉದಯ ಯಂಡಿಗೇರಿ, ಮಹಾಂತೇಶ ಲಿಂಬೆಣ್ಣದೇವರಮಠ, ಬಸವರಾಜ ಅಕ್ಕಿ, ಈರಣ್ಣ ಆಕಳವಾಡಿ, ವಿಜಯಾ ಲಿಂಬೆಣ್ಣದೇವರಮಠ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಕಂದಾಯ, ವೈದ್ಯರು ಹಾಗೂ ಪತ್ರಕರ್ತರ ದಿನಾಚರಣೆ ಅಂಗವಾಗಿ ಸಸಿ ನೆಟ್ಟು ವಿಶೇಷ ಆಚರಣೆ

# ಸೇವಾ ನಿಷ್ಠೆಯೇ ಜನರ ವಿಶ್ವಾಸದ ಅಡಿಪಾಯ

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಕಂದಾಯ ಇಲಾಖೆಯ ಸಿಬ್ಬಂದಿ ಪ್ರಾಮಾಣಿಕತೆ, ವಿಶ್ವಾಸಾರ್ಹತೆ ಹಾಗೂ ಸೇವಾ ಮನೋಭಾವದಿಂದ ಸಾರ್ವಜನಿಕರಿಗೆ ಸ್ಪಂದಿಸಿ, ಸರ್ಕಾರದ ಸೇವೆಗಳನ್ನು ಪರಿಣಾಮಕಾರಿಯಾಗಿ ತಲುಪಿಸುವ ಮೂಲಕ ಜನರ ವಿಶ್ವಾಸ ಗಳಿಸಬೇಕು ಎಂದು ತಹಸೀಲ್ದಾರ್ ಕೆ. ರಾಘವೇಂದ್ರ ರಾವ್ ಹೇಳಿದರು.

ಬುಧವಾರ ಶಿರಹಟ್ಟಿಯ ತಹಸೀಲ್ದಾರ್ ಕಚೇರಿಯಲ್ಲಿ ಕಂದಾಯ ಇಲಾಖೆ, ವೈದ್ಯರ ಹಾಗೂ ಪತ್ರಕರ್ತರ ದಿನಾಚರಣೆ ಅಂಗವಾಗಿ ಸಸಿ ನೆಟ್ಟು ಬಳಿಕ ನಡೆದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಕಂದಾಯ ಇಲಾಖೆಯಲ್ಲಿ ತಂತ್ರಜ್ಞಾನದ ಅಳವಡಿಕೆ, ಆನ್‌ಲೈನ್ ಸೇವೆಗಳ ವಿಸ್ತರಣೆ, ಭೂ ದಾಖಲೆಗಳ ಡಿಜಿಟಲೀಕರಣ, ಸೇವೆಗಳ ಸರಳೀಕರಣ ಹಾಗೂ ಪಾರದರ್ಶಕ ಆಡಳಿತಕ್ಕೆ ಹೆಚ್ಚಿನ ಒತ್ತು ನೀಡಲಾಗಿದೆ. ಇದರಿಂದ ಸಾರ್ವಜನಿಕರಿಗೆ ತ್ವರಿತ ಹಾಗೂ ಸುಲಭ ಸೇವೆ ಒದಗಿಸಲು ಸಾಧ್ಯವಾಗುತ್ತಿದ್ದು, ಇಲಾಖೆ ಇನ್ನಷ್ಟು ಜನಸ್ನೇಹಿಯಾಗಲಿದೆ ಎಂದು ತಿಳಿಸಿದರು.

ವೈದ್ಯರ ಸೇವೆ ದೇವರ ಸೇವೆಗೆ ಸಮಾನವಾಗಿದ್ದು, ರೋಗಿಗಳ ನೋವು ನಿವಾರಿಸಿ ಜೀವ ಉಳಿಸುವ ಪವಿತ್ರ ಕಾರ್ಯವನ್ನು ಅವರು ಹಗಲು–ರಾತ್ರಿ ಎನ್ನದೆ ನಿರ್ವಹಿಸುತ್ತಿದ್ದಾರೆ. ಅವರ ತ್ಯಾಗ, ಸೇವಾ ಮನೋಭಾವ ಮತ್ತು ಕರ್ತವ್ಯನಿಷ್ಠೆಯನ್ನು ಸಮಾಜ ಗೌರವಿಸಬೇಕು ಎಂದು ಹೇಳಿದರು.

ಪತ್ರಕರ್ತರ ಸಾಮಾಜಿಕ ಜವಾಬ್ದಾರಿ ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ವಸ್ತುನಿಷ್ಠ ಹಾಗೂ ಸಮಾಜದ ಹಿತ ಕಾಪಾಡುವ ವರದಿಗಳನ್ನು ಪ್ರಕಟಿಸುವ ಮೂಲಕ ಜನರ ನಂಬಿಕೆಯನ್ನು ಉಳಿಸಿಕೊಳ್ಳಬೇಕು. ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಮಾಧ್ಯಮಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಡಾ. ಸುನೀಲ ಬುರಬುರೆ, ಡಾ. ಗೋಪಾಲರಾಜ, ಗ್ರೇಡ್–2 ತಹಸೀಲ್ದಾರ್ ವಿ.ಎ. ಮುಳಗುಂದಮಠ, ಕಂದಾಯ ನಿರೀಕ್ಷಕ ಬಸವರಾಜ ಕಾತ್ರಾಳ, ಸಂತೋಷ ಅಸ್ಕಿ, ಎಚ್.ಜೆ. ಭಾವಿಕಟ್ಟಿ, ಶಂಕರ ಮರಾಠೆ, ಸಂತೋಷ ಘೋಣಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ವಿವಿಧ ಸ್ನಾತಕೋತ್ತರ ಕೋರ್ಸ್‌ಗಳಿಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ (ಕೆಎಸ್‌ಒಯು) 2026–27ನೇ ಶೈಕ್ಷಣಿಕ ಸಾಲಿನ ವಿವಿಧ ಸ್ನಾತಕ, ಸ್ನಾತಕೋತ್ತರ, ಡಿಪ್ಲೊಮಾ ಹಾಗೂ ಪಿಜಿ ಸರ್ಟಿಫಿಕೇಟ್ ಕೋರ್ಸ್‌ಗಳಿಗೆ ಪ್ರವೇಶಾತಿ ಆರಂಭಿಸಿದ್ದು, ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ.

ಬಿ.ಎ., ಬಿ.ಕಾಂ., ಬಿ.ಬಿ.ಎ., ಬಿ.ಸಿ.ಎ., ಬಿ.ಎಸ್‌ಸಿ., ಬಿ.ಎಸ್.ಡಬ್ಲ್ಯೂ., ಬಿ.ಲಿಬ್. ಸೇರಿದಂತೆ ಎಂ.ಎ., ಎಂ.ಕಾಂ., ಎಂ.ಎಸ್ಸಿ., ಎಂ.ಬಿ.ಎ., ಎಂ.ಸಿ.ಎ., ಎಂ.ಎಸ್.ಡಬ್ಲ್ಯೂ., ಎಂ.ಲಿಬ್. ಹಾಗೂ ಪತ್ರಿಕೋದ್ಯಮ ಸೇರಿದಂತೆ ವಿವಿಧ ಕೋರ್ಸ್‌ಗಳಿಗೆ ಪ್ರವೇಶ ನೀಡಲಾಗುತ್ತಿದೆ.

ವಿದ್ಯಾರ್ಥಿಗಳು ವಿಶ್ವವಿದ್ಯಾನಿಲಯದ ಅಧಿಕೃತ ವೆಬ್‌ಸೈಟ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಶುಲ್ಕ ಪಾವತಿಸುವ ಮೂಲಕ ಪ್ರವೇಶ ಪಡೆಯಬಹುದು.

ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಗದಗ ಪ್ರಾದೇಶಿಕ ಕೇಂದ್ರ, ಎಲ್.ಎಲ್. ಕಟ್ಟಡ, ಡಾ. ಪಂಡಿತ ಪುಟ್ಟರಾಜ ಕವಿ ಗವಾಯಿಗಳ ಖಾಸಗಿ ಐಟಿಐ ಹತ್ತಿರ, ಜನರಲ್ ಕೆ.ಎಂ. ಕಾರ್ಯಪ್ಪ ವೃತ್ತ (ಹಳೆಯ ಡಿಸಿ ಕಚೇರಿ ವೃತ್ತ) ಸಂಪರ್ಕಿಸಬಹುದು ಎಂದು ಪ್ರಾದೇಶಿಕ ನಿರ್ದೇಶಕ ಅಮೃತ್ ನಾಯ್ದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಚನ ಸಾಹಿತ್ಯಕ್ಕೆ ಜೀವ ತುಂಬಿದ ಮಹಾನ್ ಸಂಶೋಧಕ

# ವಚನ ಪಿತಾಮಹ ಫ.ಗು. ಹಳಕಟ್ಟಿ



ಜುಲೈ 2 -ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ ವಿಶೇಷ

ಕನ್ನಡ ಸಾಹಿತ್ಯ ಇತಿಹಾಸದಲ್ಲಿ ವಚನ ಸಾಹಿತ್ಯವನ್ನು ಸಂಗ್ರಹಿಸಿ, ಸಂಶೋಧಿಸಿ, ಜನಸಾಮಾನ್ಯರಿಗೆ ತಲುಪಿಸಿದ ಮಹಾನ್ ಸಾಧಕರಲ್ಲಿ ಫಕೀರಪ್ಪ ಗುರುಬಸಪ್ಪ ಹಳಕಟ್ಟಿ (ಫ.ಗು. ಹಳಕಟ್ಟಿ) ಅವರ ಹೆಸರು ಅಗ್ರಸ್ಥಾನದಲ್ಲಿದೆ. "ವಚನ ಪಿತಾಮಹ" ಎಂಬ ಗೌರವಕ್ಕೆ ಪಾತ್ರರಾದ ಅವರು ಕನ್ನಡ ನಾಡು, ನುಡಿ, ಸಾಹಿತ್ಯ ಮತ್ತು ಸಂಸ್ಕೃತಿಗೆ ಅಪಾರ ಕೊಡುಗೆ ನೀಡಿದ್ದಾರೆ.

1880ರ ಜುಲೈ 2ರಂದು ಧಾರವಾಡದಲ್ಲಿ ಜನಿಸಿದ ಹಳಕಟ್ಟಿಯವರು ಬಾಲ್ಯದಿಂದಲೇ ಸಾಹಿತ್ಯದ ವಾತಾವರಣದಲ್ಲಿ ಬೆಳೆದರು. ಮುಂಬೈನ ಸೇಂಟ್ ಝೇವಿಯರ್ ಕಾಲೇಜಿನಲ್ಲಿ ವಿದ್ಯಾಭ್ಯಾಸ ಮಾಡುವಾಗ ಕನ್ನಡದ ಬಗ್ಗೆ ಅಪಾರ ಅಭಿಮಾನ ಬೆಳೆಸಿಕೊಂಡ ಅವರು, ಬಳಿಕ ಕಾನೂನು ಪದವಿ ಪಡೆದು ವಿಜಯಪುರದಲ್ಲಿ ಯಶಸ್ವಿ ವಕೀಲರಾಗಿದ್ದರು. ಆದರೆ ವಚನ ಸಾಹಿತ್ಯದ ಮೇಲಿನ ಅಪಾರ ಪ್ರೀತಿಯಿಂದ ವಕೀಲ ವೃತ್ತಿಯನ್ನು ತೊರೆದು ಸಂಶೋಧನೆ ಹಾಗೂ ಸಾಹಿತ್ಯ ಸೇವೆಗೆ ತಮ್ಮ ಬದುಕನ್ನೇ ಸಮರ್ಪಿಸಿದರು.

ಹಳಕಟ್ಟಿಯವರು ರಾಜ್ಯದ ವಿವಿಧ ಭಾಗಗಳಲ್ಲಿ ಸಂಚರಿಸಿ ತಾಳೆಗರಿಗಳಲ್ಲಿದ್ದ ವಚನಗಳನ್ನು ಸಂಗ್ರಹಿಸಿದರು. ಕೇವಲ 50 ವಚನಕಾರರು ಮಾತ್ರ ಪರಿಚಿತರಾಗಿದ್ದ ಕಾಲದಲ್ಲಿ ತಮ್ಮ ಸಂಶೋಧನೆಯ ಮೂಲಕ 250ಕ್ಕೂ ಹೆಚ್ಚು ವಚನಕಾರರನ್ನು ಬೆಳಕಿಗೆ ತಂದರು. ಜೊತೆಗೆ ಹರಿಹರನ 42 ರಗಳೆಗಳನ್ನು ಸಂಶೋಧಿಸಿ ಪ್ರಕಟಿಸಿದ ಹೆಗ್ಗಳಿಕೆಯೂ ಅವರದು.

1923ರಲ್ಲಿ 'ವಚನಶಾಸ್ತ್ರ ಸಾರ' ಪ್ರಕಟಿಸಿದ ಅವರು, 1925ರಲ್ಲಿ 'ಹಿತಚಿಂತಕ' ಮುದ್ರಣಾಲಯ ಸ್ಥಾಪಿಸಿ ವಚನ ಸಾಹಿತ್ಯ ಪ್ರಕಟಣೆಗೆ ತಮ್ಮ ಆಸ್ತಿಯನ್ನೇ ಮುಡಿಪಾಗಿಟ್ಟರು. 'ವಚನ ಸಾಹಿತ್ಯ ಸಾರ', 'ಶೂನ್ಯ ಸಂಪಾದನೆ', 'ಶಿವಾನುಭವ', 'ಹರಿಹರನ ರಗಳೆ', 'ಪ್ರದೀಪಿಕೆ', 'ಶಬ್ದ ಕೋಶ', 'ಆದಿಶೆಟ್ಟಿ ಪುರಾಣ' ಸೇರಿದಂತೆ ಹಲವು ಮಹತ್ವದ ಕೃತಿಗಳನ್ನು ಸಂಪಾದಿಸಿ ಪ್ರಕಟಿಸಿದರು.

ಪತ್ರಿಕೋದ್ಯಮದಲ್ಲಿಯೂ ತಮ್ಮ ಛಾಪು ಮೂಡಿಸಿದ ಅವರು 1926ರಲ್ಲಿ 'ಶಿವಾನುಭವ' ಹಾಗೂ 1927ರಲ್ಲಿ 'ನವ ಕರ್ನಾಟಕ' ಪತ್ರಿಕೆಗಳನ್ನು ಆರಂಭಿಸಿ ಕನ್ನಡ ಸಾಹಿತ್ಯ ಮತ್ತು ಸಂಶೋಧನೆಗೆ ಹೊಸ ದಿಕ್ಕು ನೀಡಿದರು.

ಸಾಹಿತ್ಯ ಸೇವೆಯ ಜೊತೆಗೆ ಸಮಾಜಮುಖಿ ಕಾರ್ಯಗಳಲ್ಲೂ ಅವರು ಮುಂಚೂಣಿಯಲ್ಲಿದ್ದರು. ವಿಜಯಪುರ ಲಿಂಗಾಯತ ಶಿಕ್ಷಣ ಸಂಸ್ಥೆ, ಸಿದ್ಧೇಶ್ವರ ಅರ್ಬನ್ ಕೋ–ಆಪರೇಟಿವ್ ಬ್ಯಾಂಕ್, ಒಕ್ಕಲುತನ ಸಹಕಾರಿ ಸಂಘ, ನೇಕಾರ ಸಹಕಾರಿ ಸಂಘ ಸೇರಿದಂತೆ ಹಲವು ಸಂಸ್ಥೆಗಳನ್ನು ಸ್ಥಾಪಿಸಿ ಸಮಾಜದ ಅಭಿವೃದ್ಧಿಗೆ ಶ್ರಮಿಸಿದರು.

ಬಸವಣ್ಣನವರ ವಚನಗಳನ್ನು ಇಂಗ್ಲಿಷ್‌ಗೆ ಅನುವಾದಿಸಿ ವಿಶ್ವಕ್ಕೆ ಪರಿಚಯಿಸಿದ ಅವರ ಸೇವೆಯನ್ನು ಗೌರವಿಸಿ "ವಚನ ಪಿತಾಮಹ" ಎಂಬ ಬಿರುದು ನೀಡಲಾಯಿತು.

1964ರ ಜೂನ್ 29ರಂದು ಹಳಕಟ್ಟಿಯವರು ನಿಧನರಾದರೂ, ಅವರು ಸಂಗ್ರಹಿಸಿ ಉಳಿಸಿದ ವಚನ ಸಂಪತ್ತು ಮತ್ತು ಕಟ್ಟಿದ ಸಂಸ್ಥೆಗಳು ಇಂದಿಗೂ ಅವರ ಹೆಸರನ್ನು ಅಜರಾಮರಗೊಳಿಸಿವೆ. ಜುಲೈ 2ರಂದು ಆಚರಿಸಲಾಗುವ ವಚನ ಸಾಹಿತ್ಯ ಸಂರಕ್ಷಣಾ ದಿನ ಅವರ ಅಪೂರ್ವ ಸಾಹಿತ್ಯ ಸೇವೆಯನ್ನು ಸ್ಮರಿಸುವ ಮಹತ್ವದ ದಿನವಾಗಿದೆ.

■ **ಶ್ರೀಮತಿ ಅಂಜನಾ ರಾಘವೇಂದ್ರ ಕುಬೇರ,**
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಗದಗ

# ತೋಟಕ್ಕೆ ನುಗ್ಗಿ 390 ಕ್ಕೂ ಹೆಚ್ಚು ಅಡಿಕೆ ಹೊಂಬಾಳೆ ಕದ್ದ ಕಳ್ಳರು



**ಮೈಸೂರು:** ತೋಟಕ್ಕೆ ನುಗ್ಗಿ ಅಡಕೆ, ತೆಂಗಿನಕಾಯಿ ಕಳವು ಮಾಡುವುದು ಸಾಮಾನ್ಯ. ಆದರೆ ಬರೋಬ್ಬರಿ 390ಕ್ಕೂ ಹೆಚ್ಚು ಅಡಕೆ ಹೊಂಬಾಳೆಯನ್ನು ಕದ್ದೊಯ್ದಿರುವ ಘಟನೆ ತಾಲೂಕಿನ ಕಳಲವಾಡಿ ಗ್ರಾಮದಲ್ಲಿ ನಡೆದಿದೆ.

ರವೀಂದ್ರ ರೆಡ್ಡಿ ಅವರಿಗೆ ಸೇರಿದ ಅಡಕೆ ತೋಟದಲ್ಲಿ ಕಳ್ಳರು ಸರಣಿ ಕೃತ್ಯ ಎಸಗಿದ್ದು, ಮೂರು ದಿನಗಳ ಅಂತರದಲ್ಲಿ 390ಕ್ಕೂ ಹೆಚ್ಚು ಹೊಂಬಾಳೆಗಳನ್ನು ಕತ್ತರಿಸಿ ಕೊಂಡೊಯ್ದಿದ್ದಾರೆ.

ಈ ಸಂಬಂಧ ಮೈಸೂರು ದಕ್ಷಿಣ ಪೊಲೀಸ್ ಠಾಣೆಯ ಉಪನಿರೀಕ್ಷಕರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದರು. ಪೊಲೀಸರ ಭೇಟಿ ಬಳಿಕವೂ ಕೂಡ ಕೃತ್ಯ ನಿಲ್ಲಿಸದ ದುಷ್ಕರ್ಮಿಗಳು ಮತ್ತೆ ತೋಟಕ್ಕೆ ನುಗ್ಗಿ 100 ಮರಗಳ ಹೊಂಬಾಳೆಯನ್ನು ಕದ್ದೊಯ್ದಿದ್ದಾರೆ.

ಒಟ್ಟು ಮೂರು ದಿನಗಳ ಅಂತರದಲ್ಲಿ 390 ಅಡಕೆ ಹೊಂಬಾಳೆಯನ್ನು ನಾಶ ಮಾಡಿದ್ದಾರೆ. ಇದರಿಂದ ರೈತ ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಅಡಕೆ ಮರಗಳ ಬೆಳವಣಿಗೆ ಹಾಗೂ ಇಳುವರಿಗೆ ಹೊಂಬಾಳೆ ಪ್ರಮುಖವಾಗಿದ್ದು, ಇದನ್ನೇ ದುಷ್ಕರ್ಮಿಗಳು ಕತ್ತರಿಸಿರುವುದರಿಂದ ಮರಗಳ ಬೆಳವಣಿಗೆ ಕುಂಠಿತವಾಗಿ ಇಳುವರಿಯ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ ಎಂದು ರೈತ ಅಳಲು ತೋಡಿಕೊಂಡಿದ್ದಾರೆ.

ಸ್ಥಳೀಯರ ಪ್ರಕಾರ ಕಳ್ಳತನವಾಗಿರುವ ಹೊಂಬಾಳೆಯನ್ನು ಮದುವೆ ಸೇರಿದಂತೆ ಇತರೆ ಶುಭ ಸಂದರ್ಭದಲ್ಲಿ ಬಳಸಲಾಗುತ್ತದೆ. ಮಾರುಕಟ್ಟೆಯಲ್ಲಿ ಇದಕ್ಕೆ ಉತ್ತಮ ಬೆಲೆಯೂ ಇದೆ. ಸಾಮಾನ್ಯವಾಗಿ ಅಡಕೆ ಹೊಂಬು ಕಟ್ಟಿದ ಹೊಂಬಾಳೆಯನ್ನು ಯಾರೂ ಕೊಯ್ಲು ಮಾಡುವುದಿಲ್ಲ.

ಹೊಂಬು (ಕಾಯಿ) ಇಲ್ಲದ ಹೊಂಬಾಳೆಗಳನ್ನು ಬಳಸಲಾಗುತ್ತದೆ. ಆದರೆ ಇಲ್ಲಿ ಫಲಭರಿತವಾಗಿದ್ದ ಹೊಂಬಾಳೆಗಳನ್ನು ಕತ್ತರಿಸಲಾಗಿದ್ದು, ಇದರಿಂದ ಭಾರೀ ನಷ್ಟವಾಗಿದೆ.

ಇದನ್ನು ಖರೀದಿಸುವವರು ಹಾಗೂ ಕೃತ್ಯ ಎಸಗಿರುವವರ ವಿರುದ್ಧ ಪೊಲೀಸರು ಕ್ರಮ ಕೈಗೊಳ್ಳುವಂತೆ ರೈತರು ಒತ್ತಾಯಿಸಿದ್ದಾರೆ. ಪೊಲೀಸರ ಭೇಟಿ ಬಳಿಕವೂ ಸಹ ಸತತವಾಗಿ ಎರಡು ದಿನ ರಾತ್ರಿ ಕಳ್ಳತನ ನಡೆದಿರುವುದು ಗ್ರಾಮಸ್ಥರ ಆತಂಕಕ್ಕೆ ಕಾರಣವಾಗಿದೆ.

# ಕಾವೇರಿ ವನ್ಯಜೀವಿ ವಲಯದಲ್ಲಿ ರೈಲ್ವೆ ಬ್ಯಾರಿಕೇಡ್‌ಗೆ ಸಿಲುಕಿದ ನರಳಾಡಿದ ಕಾಡಾನೆ

**ಕನಕಪುರ:** ತಾಲ್ಲೂಕಿನ ಕಾವೇರಿ ವನ್ಯಜೀವಿ ವಲಯದ ಅರೆಕೊಪ್ಪ ಗ್ರಾಮದ ಸಮೀಪ ಅರಣ್ಯ ಪ್ರದೇಶದಲ್ಲಿ ರೈಲ್ವೆ ಬ್ಯಾರಿಕೇಡ್ ತಡೆಗೋಡೆ ದಾಟಲು ಯತ್ನಿಸಿದ ವೇಳೆ ಕಾಡಾನೆಯೊಂದು ಬ್ಯಾರಿಕೇಡ್‌ನಲ್ಲಿ ಸಿಕ್ಕಿಹಾಕಿಕೊಂಡ ಘಟನೆ ನಡೆದಿದೆ.



ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆ ಅರಣ್ಯ ಇಲಾಖೆ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಕಾಡಾನೆಯನ್ನು ಸುರಕ್ಷಿತವಾಗಿ ಬಿಡಿಸುವ ಕಾರ್ಯಾಚರಣೆ ನಡೆಸಿದರು. ಈ ಘಟನೆ ವನ್ಯಜೀವಿಗಳ ಸುರಕ್ಷತೆ ಕುರಿತು ಮತ್ತೊಮ್ಮೆ ಆತಂಕ ಮೂಡಿಸಿದ್ದು, ಅರಣ್ಯ ಪ್ರದೇಶಗಳಲ್ಲಿ ಅಳವಡಿಸಲಾಗುತ್ತಿರುವ ಬ್ಯಾರಿಕೇಡ್‌ಗಳ ವಿನ್ಯಾಸದ ಬಗ್ಗೆ ಚರ್ಚೆಗೆ ಕಾರಣವಾಗಿದೆ.

ಘಟನೆ ಕುರಿತು ಪ್ರತಿಕ್ರಿಯಿಸಿರುವ ಸಾಮಾಜಿಕ ಕಾರ್ಯಕರ್ತ ಶಿವಕುಮಾರ್ ಎಸ್.ಎಸ್ ರೈಲ್ವೆ ಬ್ಯಾರಿಕೇಡ್ ತಡೆಗೋಡೆಗಳ ನಡುವಿನ ಅಂತರವನ್ನು ಅಗತ್ಯಕ್ಕಿಂತ ಹೆಚ್ಚಾಗಿ ಬಿಟ್ಟಿರುವುದೇ ಕಾಡಾನೆ ಸಿಕ್ಕಿಹಾಕಿಕೊಳ್ಳಲು ಪ್ರಮುಖ ಕಾರಣ ಎಂದು ಆರೋಪಿಸಿದ್ದಾರೆ. ಆನೆಗಳು ಆ ಅಂತರದೊಳಗೆ ಸುಲಭವಾಗಿ ಪ್ರವೇಶಿಸಿದರೂ, ಹೊರಬರಲು ಸಾಧ್ಯವಾಗದೆ ಸಂಕಷ್ಟಕ್ಕೆ ಸಿಲುಕುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ. ಕಾಡುಪ್ರಾಣಿಗಳ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಬ್ಯಾರಿಕೇಡ್‌ಗಳನ್ನು ವೈಜ್ಞಾನಿಕವಾಗಿ ಅಳವಡಿಸಬೇಕು. ತಡೆಗೋಡೆಗಳ ನಡುವಿನ ಅಂತರವನ್ನು ಮರುಪರಿಶೀಲಿಸಿ ಅಗತ್ಯ ಬದಲಾವಣೆಗಳನ್ನು ಮಾಡದಿದ್ದರೆ ಇಂತಹ ಘಟನೆಗಳು ಮುಂದೆಯೂ ಮರುಕಳಿಸುವ ಸಾಧ್ಯತೆ ಇದೆ. ಆದ್ದರಿಂದ ಸಂಬಂಧಿತ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ಬ್ಯಾರಿಕೇಡ್ ವಿನ್ಯಾಸದಲ್ಲಿ ಅಗತ್ಯ ಮಾರ್ಪಾಡುಗಳನ್ನು ಕೈಗೊಳ್ಳಬೇಕು ಎಂದು ಶಿವಕುಮಾರ್ ಎಸ್.ಎಸ್. ಒತ್ತಾಯಿಸಿದ್ದಾರೆ. ಅಲ್ಲದೆ, ಕಾವೇರಿ ವನ್ಯಜೀವಿ ವಲಯದಲ್ಲಿ ವನ್ಯಜೀವಿಗಳ ಜೀವಕ್ಕೆ ಅಪಾಯವಾಗದ ರೀತಿಯಲ್ಲಿ ಬ್ಯಾರಿಕೇಡ್‌ಗಳನ್ನು ಮರು ವಿನ್ಯಾಸಗೊಳಿಸಬೇಕು.

## ಮಣ್ಣಿನ ಫಲವತ್ತತೆ ಕೊರತೆಗೆ ಹೊಸ ಆವಿಷ್ಕಾರ


# ಯುಎಎಸ್-ಜಿಕೆವಿಕೆ ವಿಜ್ಞಾನಿಗಳಿಂದ ಬಯೋಚಾರ್ ರೈತ ಸ್ನೇಹಿ ತಂತ್ರಜ್ಞಾನ ಅಭಿವೃದ್ಧಿ, ಏನಿದರ ಮಹತ್ವ?

**ಹುಬ್ಬಳ್ಳಿ:** ಸಣ್ಣ ಮತ್ತು ಅತಿಸಣ್ಣ ಮಟ್ಟದ ರೈತರು ಮಣ್ಣಿನ ಪೋಷಕಾಂಶವನ್ನು ಹೆಚ್ಚಿಸಿಕೊಳ್ಳಲು ನೆರವಾಗುವ ಕಡಿಮೆ ವೆಚ್ಚದ ಬಯೋಚಾರ್ ತಂತ್ರಜ್ಞಾನವನ್ನು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಧಾರವಾಡ ಮತ್ತು ಗಾಂಧಿ ಕೃಷಿ ವಿಜ್ಞಾನ ಕೇಂದ್ರ, ಬೆಂಗಳೂರು ವಿಜ್ಞಾನಿಗಳು ಅಭಿವೃದ್ಧಿಪಡಿಸಿದ್ದಾರೆ. ಯುಎಎಸ್ ಕುಲಪತಿ ಎಸ್.ವಿ. ಸುರೇಶ್ ಈ ಬಗ್ಗೆ ಮಾಹಿತಿ ನೀಡಿ, ಕರ್ನಾಟಕದ ಅರ್ಧಕ್ಕಿಂತ ಹೆಚ್ಚು ಕೃಷಿಭೂಮಿಯಲ್ಲಿ ಮಣ್ಣಿನ ಸಾವಯವ ಇಂಗಾಲದ ಪ್ರಮಾಣ ಅಗತ್ಯ ಮಟ್ಟಕ್ಕಿಂತ ಕೆಳಗೆ ಇಳಿದಿದೆ. ಇನ್ನು ಮುಂದೆ ನಿರ್ಲಕ್ಷಿಸಲು ಸಾಧ್ಯವಿಲ್ಲ. ರೈತರು ಸುಡುವ ಕೃಷಿ ಅವಶೇಷಗಳನ್ನು ಬಯೋಚಾರ್ ಆಗಿ ಪರಿವರ್ತಿಸುವ ಮೂಲಕ ಮಣ್ಣಿನ ಪುನರುಜ್ಜೀವನಕ್ಕೆ ನೆರವಾಗಬಹುದು ಎಂದು ಹೇಳಿದರು.

### ಸ್ಥಳೀಯ ಕೃಷಿ ಅವಶೇಷಗಳಿಂದ ಬಯೋಚಾರ್

ಯುಎಎಸ್‌ನ ಅಖಿಲ ಭಾರತ ಸಮನ್ವಿತ ಸಂಶೋಧನಾ ಯೋಜನೆ – ಮಣ್ಣಿನ ಪರೀಕ್ಷೆ ಮತ್ತು ಬೆಳೆ ಪ್ರತಿಕ್ರಿಯೆ (ಖಖಿಅಖ) ವಿಭಾಗದ ಮುಖ್ಯಸ್ಥ ಡಾ. ಆರ್. ಕೃಷ್ಣಮೂರ್ತಿ, ಬಯೋಚಾರ್ ತಯಾರಿಸಲು ಯಾವುದೇ ಹೊರಗಿನ ರಾಸಾಯನಿಕಗಳು ಅಥವಾ ಪೂರಕ ವಸ್ತುಗಳನ್ನು ಬಳಸುವುದಿಲ್ಲ ಎಂದು ತಿಳಿಸಿದರು. ತೊಗರಿ, ಮೆಕ್ಕೆಜೋಳ ಮತ್ತು ಮಲ್ಬೆರಿ ಕಾಂಡಗಳು, ಸೂರ್ಯಕಾಂತಿ ಹಾಗೂ ಇತರ ಬೆಳೆಗಳ ಕೊಂಬೆ ಕತ್ತರಿಸಿದ ಅವಶೇಷಗಳಂತಹ ಸ್ಥಳೀಯವಾಗಿ ಲಭ್ಯವಿರುವ ಕೃಷಿ ತ್ಯಾಜ್ಯಗಳನ್ನು ಬಳಸಲಾಗುತ್ತದೆ ಎಂದು ಅವರು ಹೇಳಿದರು.

ನಾವು ವಿಶೇಷವಾಗಿ 25 ಕೆ.ಜಿ. ಸಾಮರ್ಥ್ಯದ ಡ್ರಮ್ ನ್ನು ವಿನ್ಯಾಸಗೊಳಿಸಿದ್ದೇವೆ. ಇದರಲ್ಲಿ ಸೀಮಿತ ಪ್ರಮಾಣದ ಆಮ್ಲಜನಕ ಹರಿಯುವಂತೆ ರಂಧ್ರಗಳಿರುತ್ತವೆ. ಕಚ್ಚಾ ವಸ್ತುಗಳನ್ನು ಮುಚ್ಚಳ ಮುಚ್ಚಿದ ಸ್ಥಿತಿಯಲ್ಲಿ ಸುಮಾರು ಮೂರು ಗಂಟೆಗಳ ಕಾಲ ಸುಟ್ಟರೆ ಬಯೋಚಾರ್ ಸಿದ್ಧವಾಗುತ್ತದೆ. ಒಂದು ಕೆ.ಜಿ. ಬಯೋಚಾರ್‌ನಲ್ಲಿ 500ರಿಂದ 800 ಗ್ರಾಂ (ಶೇ.50–80) ಇಂಗಾಲ ಇರುತ್ತದೆ ಎಂದು ವಿವರಿಸಿದರು.



### ಮಣ್ಣಿನಲ್ಲಿ ಇಂಗಾಲದ ಪ್ರಮಾಣ ಕುಸಿತ

ರಾಷ್ಟ್ರೀಯ ಮಾನದಂಡಗಳ ಪ್ರಕಾರ, ಒಂದು ಹೆಕ್ಟೇರ್ ಕೃಷಿಭೂಮಿಯಲ್ಲಿ ಕನಿಷ್ಠ ಶೇ.0.75 ಸಾವಯವ ಇಂಗಾಲ ಇರಬೇಕು. ಆದರೆ ಪ್ರಸ್ತುತ ಕರ್ನಾಟಕ ಹಾಗೂ ದೇಶದ ಬಹುತೇಕ ಭಾಗಗಳ ಕೃಷಿಭೂಮಿಯಲ್ಲಿ ಇದು ಶೇ.0.33ರಿಂದ 0.5ರಷ್ಟಿದೆ. ಅರಣ್ಯ ಪ್ರದೇಶಗಳ ಸುತ್ತಮುತ್ತ ಮಾತ್ರ ಇಂಗಾಲದ ಪ್ರಮಾಣ ಶೇ.1ರಿಂದ 1.5ರಷ್ಟಿದೆ ಎಂದು ವಿಜ್ಞಾನಿಗಳು ತಿಳಿಸಿದ್ದಾರೆ. ಮಣ್ಣಿನ ಸಾವಯವ ಇಂಗಾಲ ಕೊರತೆಯಿಂದ ಅತ್ಯಂತ ಹೆಚ್ಚು ಹಾನಿಗೊಳಗಾಗಿರುವ ಜಿಲ್ಲೆ ಕೋಲಾರವಾಗಿದ್ದು, ಜಿಲ್ಲೆಯ ಶೇ.94ಕ್ಕಿಂತ ಹೆಚ್ಚು ಕೃಷಿಭೂಮಿಯಲ್ಲಿ ಸಾವಯವ ಇಂಗಾಲದ ಪ್ರಮಾಣ ಕಡಿಮೆಯಾಗಿದೆ ಎಂದರು.

ಅತಿಯಾದ ರಾಸಾಯನಿಕ ಗೊಬ್ಬರ ಬಳಕೆ, ಜಾನುವಾರುಗಳ ಸಂಖ್ಯೆ ಕಡಿಮೆಯಾಗಿರುವುದು, ಸಾವಯವ ಗೊಬ್ಬರದ ಬೆಲೆ ಏರಿಕೆ, ಒಂದೇ ಬೆಳೆ ಬೆಳೆಯುವ ಪದ್ಧತಿ ಹಾಗೂ ಬೆಳೆ ಅವಶೇಷಗಳನ್ನು ಬಹಿರಂಗವಾಗಿ ಸುಡುವ ಕ್ರಮದಿಂದ ಮಣ್ಣಿಗೆ ಅಗತ್ಯವಾದ ಜೀವಸತ್ವಯುಕ್ತ ಇಂಗಾಲದ ಪ್ರಮಾಣ ಗಣನೀಯವಾಗಿ ಕುಸಿದಿದೆ ಎಂದು ವಿಜ್ಞಾನಿಗಳು ಅಭಿಪ್ರಾಯಪಟ್ಟಿದ್ದಾರೆ.

### ಗೊಬ್ಬರ ಆಮದು ಅವಲಂಬನೆ ಕಡಿಮೆ ಮಾಡುವ ಸಾಮರ್ಥ್ಯ

ಪ್ರಸ್ತುತ ಭಾರತವು ತನ್ನ ಅಗತ್ಯದ ಶೇ.20ರಿಂದ 25ರಷ್ಟು ಯೂರಿಯಾ, ಶೇ.50ರಿಂದ 60ರಷ್ಟು ಡೈಅಮೋನಿಯಂ ಫಾಸ್ಫೇಟ್ ಹಾಗೂ ಸುಮಾರು ಶೇ.100ರಷ್ಟು ಮ್ಯುರಿಯೇಟ್ ಆಫ್ ಪೊಟ್ಯಾಶ್ ನ್ನು ಆಮದು ಮಾಡಿಕೊಳ್ಳುತ್ತಿದೆ. ನೈಸರ್ಗಿಕ ಅನಿಲ, ರಾಕ್ ಫಾಸ್ಫೇಟ್ ಹಾಗೂ ಗಂಧಕದಂತಹ ಕಚ್ಚಾ ವಸ್ತುಗಳ ಆಮದು ಅವಲಂಬನೆಯನ್ನು ಸೇರಿಸಿದರೆ, ಜಾಗತಿಕ ಗೊಬ್ಬರ ಪೂರೈಕೆ ಸರಪಳಿಯ ಮೇಲಿನ ಭಾರತದ ಅವಲಂಬನೆ ಶೇ.68ರಿಂದ 70ಕ್ಕೆ ಏರುತ್ತದೆ ಎಂದು ವಿಜ್ಞಾನಿಗಳು ತಿಳಿಸಿದ್ದು, ಪಶ್ಚಿಮ ಏಷ್ಯಾದ ಸಂಘರ್ಷದಿಂದ ಈ ಅವಲಂಬನೆಯ ಸಮಸ್ಯೆ ಮತ್ತಷ್ಟು ತೀವ್ರವಾಗಿದೆ ಎಂದರು.

ಬಯೋಚಾರ್ ರಾಸಾಯನಿಕ ಗೊಬ್ಬರಕ್ಕೆ ಪರ್ಯಾಯವಲ್ಲ. ಆದರೆ ಸಾರಜನಕ (ನೈಟ್ರೋಜನ್), ರಂಜಕ (ಫಾಸ್ಫರಸ್) ಮತ್ತು ಪೊಟ್ಯಾಶ್ ಗೊಬ್ಬರಗಳ ಪರಿಣಾಮಕಾರಿತ್ವವನ್ನು ಹೆಚ್ಚಿಸುವ ಸಾಮರ್ಥ್ಯ ಹೊಂದಿರುವುದರಿಂದ, ಭಾರತವು ಆಮದು ಗೊಬ್ಬರಗಳ ಮೇಲಿನ ದೀರ್ಘಕಾಲೀನ ಅವಲಂಬನೆಯನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ಇದು ಪ್ರಮುಖ ಪೂರಕ ತಂತ್ರಜ್ಞಾನವಾಗಬಹುದು ಎಂದು ವಿಜ್ಞಾನಿಗಳು ಅಭಿಪ್ರಾಯಪಟ್ಟಿದ್ದಾರೆ.

## 'ಸುರಕ್ಷಿತ ಪಾದಚಾರಿ ಮಾರ್ಗ' ಅಭಿಯಾನ

# ಬೆಂಗಳೂರಿನಲ್ಲಿ ಪಾದಚಾರಿ ಮಾರ್ಗಗಳ ಮೇಲಿನ ಅತಿಕ್ರಮಣ ತೆರವು ಆರಂಭಿಸಿದ ಗ್ರೇಟರ್ ಬೆಂಗಳೂರು ಅಥಾರಿಟಿ

**ಬೆಂಗಳೂರು:** 'ಸುರಕ್ಷಿತ ಪಾದಚಾರಿ ಮಾರ್ಗ' ಅಭಿಯಾನದ ಅಂಗವಾಗಿ, ಗ್ರೇಟರ್ ಬೆಂಗಳೂರು ಅಥಾರಿಟಿ ನಗರದ ವಿವಿಧ ಭಾಗಗಳಲ್ಲಿನ ಪಾದಚಾರಿ ಮಾರ್ಗಗಳ ಮೇಲಿನ ಅತಿಕ್ರಮಣ ತೆರವು ಕಾರ್ಯವನ್ನು ಬುಧವಾರ ಬೆಳಗ್ಗೆಯಿಂದ ಆರಂಭಿಸಿದೆ.

ಜೂನ್ 29ರಂದು ಕರ್ನಾಟಕದ ಸಚಿವ ಕೃಷ್ಣಬೈರೇಗೌಡ ಅವರು ಗ್ರೇಟರ್ ಬೆಂಗಳೂರು ಅಥಾರಿಟಿಯ ವ್ಯಾಪ್ತಿಯ ಐದು ನಗರ ನಿಗಮಗಳ ವ್ಯಾಪ್ತಿಯಲ್ಲಿರುವ ಪಾದಚಾರಿ ಮಾರ್ಗಗಳ ಮೇಲಿನ ಅತಿಕ್ರಮಣ ತೆರವುಗೊಳಿಸಲು ಸಮಗ್ರ ಕಾರ್ಯಯೋಜನೆ ರೂಪಿಸಿ ವಿಶೇಷ ಅಭಿಯಾನ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದರು. ಅದರಂತೆ ಈ ಕಾರ್ಯಾಚರಣೆ ಆರಂಭವಾಗಿದೆ.

ಈ ಅಭಿಯಾನದಡಿ ಟ್ರಿನಿಟಿ ಜಂಕ್ಷನ್‌ನಿಂದ ಎಂಜಿ ರೋಡ್ ಪಾರ್ಕ್‌ವರೆಗೆ, 100 ಅಡಿ ಇಂದಿರಾನಗರ ರಸ್ತೆಯಿಂದ ದೊಮ್ಮಲೂರು ಫ್ಲೈಓವರ್‌ವರೆಗೆ, ವಿವೇಕಾನಂದ ಮೆಟ್ರೋ ನಿಲ್ದಾಣದಿಂದ ಬೆನ್ನಿಗಾನಹಳ್ಳಿ ರೈಲ್ವೆ ಸೇತುವೆಯವರೆಗೆ, ಅಶೋಕ ಪಿಲ್ಲರ್‌ನಿಂದ ಮಾಧವನ್ ಪಾರ್ಕ್‌ವರೆಗೆ, ಜಯನಗರದ 8ನೇ ಮತ್ತು 9ನೇ ಮುಖ್ಯರಸ್ತೆ (ಕನಕಪಾಳ್ಯ ರಸ್ತೆದಿಂದ 15ನೇ ಕ್ರಾಸ್‌ವರೆಗೆ) ಹಾಗೂ ಆರ್‌ವಿ ರಸ್ತೆಯ ಟೀಚರ್ಸ್ ಕಾಲೇಜಿನಿಂದ ಸೌತ್ ಎಂಡ್ ಸರ್ಕಲ್‌ವರೆಗೆ ಅತಿಕ್ರಮಣ ತೆರವು ಕಾರ್ಯ ನಡೆಯಲಿದೆ.



ಸಚಿವರ ಮಾಹಿತಿ ಪ್ರಕಾರ, ಈ ಅಭಿಯಾನವನ್ನು ಸರ್ವೋಚ್ಚ ನ್ಯಾಯಾಲಯದ ಆದೇಶಗಳು ಹಾಗೂ ಬೀದಿ ವ್ಯಾಪಾರಿಗಳ (ಜೀವನೋಪಾಯ ರಕ್ಷಣೆ ಮತ್ತು ಬೀದಿ ವ್ಯಾಪಾರ ನಿಯಂತ್ರಣ) ಕಾಯ್ದೆಯ ನಿಯಮಾವಳಿಗಳಿಗೆ ಅನುಗುಣವಾಗಿ ಜಾರಿಗೊಳಿಸಲಾಗುತ್ತಿದೆ.

ಬೆಳಗ್ಗೆ 9:30ಕ್ಕೆ ಶುರುವಾದ ಈ ಕಾರ್ಯಾಚರಣೆಗೆ ಜೆಸಿಬಿಗಳನ್ನು ಬಳಸಲಾಗುತ್ತಿದೆ. ಸ್ಥಳೀಯ ಅಧಿಕಾರಿಗಳ ನೇತೃತ್ವದಲ್ಲಿ ಪೊಲೀಸರ ಬೆಂಗಾವಲು ಸಹ ಒದಗಿಸಲಾಗಿದೆ.

ಜಯನಗರದ ಅಶೋಕ ಪಿಲ್ಲರ್ ಸಮೀಪದಿಂದ ಬುಧವಾರ ಬೆಳಗ್ಗೆ ಕಾರ್ಯಾಚರಣೆ ಆರಂಭಗೊಂಡಿದ್ದು, ಅಂಗಡಿಗಳು ಮತ್ತು ಕಟ್ಟಡ ಕಾಮಗಾರಿಗೆ ಸಂಬಂಧಿಸಿದ ವಸ್ತುಗಳಿಂದ ಒತ್ತುವರಿ ಮಾಡಲಾಗಿದ್ದ ಫುಟ್‌ಪಾತ್‌ಗಳನ್ನು ತೆರವುಗೊಳಿಸಲಾಗುತ್ತಿದೆ.

ಬೆಂಗಳೂರು ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯ ವಾರ್ಡ್ ನಂಬರ್ 153 ರಲ್ಲಿ, ಅಶೋಕ ಪಿಲ್ಲರ್‌ನಿಂದ ಮಾಧವನ್ ಪಾರ್ಕ್‌ವರೆಗೆ ಈ ತೆರವು ನಡೆಯುತ್ತಿದೆ.

ಪಾದಚಾರಿಗಳ ಸುಗಮ ಸಂಚಾರಕ್ಕೆ ಅಡ್ಡಿಯಾಗಿದ್ದ ಎಲ್ಲ ಒತ್ತುವರಿಗಳನ್ನು ತೆರವುಗೊಳಿಸಿ, ಭವಿಷ್ಯದಲ್ಲಿ ಮತ್ತೆ ಒತ್ತುವರಿ ಮಾಡದಂತೆ ನಿಗಾ ವಹಿಸಲು ಜಿಬಿಎ ಎಚ್ಚರಿಕೆ ವಹಿಸುತ್ತಿದೆ.

# ಗ್ರೇಟ್ ಅಮೆರಿಕನ್ನರ ಪಟ್ಟಿಗೆ ನಾಲ್ವರು ಭಾರತೀಯರು



**ಹೂಸ್ಟನ್:** ಸೈಬರ್ ಸೆಕ್ಯುರಿಟಿ ಕಾರ್ಯನಿರ್ವಾಹಕ ನಿಕೇಶ್ ಅರೋರಾ ಮತ್ತು ಹಾರ್ವರ್ಡ್ ಪ್ರಾಧ್ಯಾಪಕ ಮಹ್ಜರಿನ್ ಬನಾಜಿ ಸೇರಿದಂತೆ ನಾಲ್ವರು ಭಾರತೀಯ ಅಮೆರಿಕನ್ನರನ್ನು ನ್ಯೂಯಾರ್ಕ್‌ನ ಕಾರ್ನೆಗೀ ಕಾರ್ಪೊರೇಷನ್‌ನ 2026 ರ ಪ್ರತಿಷ್ಠಿತ ಗ್ರೇಟ್ ಇಮಿಗ್ರಂಟ್ಸ್, ಗ್ರೇಟ್ ಅಮೆರಿಕನ್ನರ ಪಟ್ಟಿಗೆ ಹೆಸರಿಸಲಾಗಿದೆ.

ಹಾರ್ವರ್ಡ್ ವೈದ್ಯಕೀಯ ಶಾಲೆಯ ಪ್ರಾಧ್ಯಾಪಕ ಡಾ. ಸಂಜೀವ್ ಚೋಪ್ರಾ ಮತ್ತು ವರ್ಟೆಕ್ಸ್ ಫಾರ್ಮಾಸ್ಯುಟಿಕಲ್ಸ್ ಅಧ್ಯಕ್ಷೆ ಮತ್ತು ಸಿಇಒ ರೇಷ್ಮಾ ಕೇವಲರಮಣಿ ಇತರ ಭಾರತೀಯ–ಅಮೆರಿಕನ್ ಗೌರವ ಪುರಸ್ಕೃತರು.

2026 ರ ವರ್ಗವು 21 ದೇಶಗಳಿಂದ 25 ನೈಸರ್ಗಿಕ ಯುಎಸ್ ನಾಗರಿಕರನ್ನು ಒಳಗೊಂಡಿದೆ ಮತ್ತು ಯುನೈಟೆಡ್ ಸ್ಟೇಟ್ಸ್ ತನ್ನ ಸ್ವಾತಂತ್ರ್ಯದ 250 ನೇ ವಾರ್ಷಿಕೋತ್ಸವವನ್ನು ಗುರುತಿಸಲು ತಯಾರಿ ನಡೆಸುತ್ತಿರುವಾಗ ಈ ಘೋಷಣೆ ಮಾಡಲಾಗಿದೆ.

ಯುನೈಟೆಡ್ ಸ್ಟೇಟ್ಸ್ ಗೆ ವಲಸಿಗರ ಕೊಡುಗೆಗಳನ್ನು ಆಚರಿಸುವ ಕಾರ್ನೆಗೀ ಕಾರ್ಪೊರೇಷನ್‌ನ ವಾರ್ಷಿಕ ಜುಲೈ ನಾಲ್ಕನೇ ಗ್ರೇಟ್ ಇಮಿಗ್ರಂಟ್ಸ್, ಗ್ರೇಟ್ ಅಮೆರಿಕನ್ನರ ಅಭಿಯಾನದ ಭಾಗವಾಗಿ ಗೌರವ ಪುರಸ್ಕೃತರನ್ನು ಗುರುತಿಸಲಾಗುತ್ತದೆ. ಪಾಲೊ ಆಲ್ಟೊ ನೆಟ್‌ವರ್ಕ್ಸ್‌ನ ಅಧ್ಯಕ್ಷ ಮತ್ತು ಸಿಇಒ ಅರೋರಾ ಉತ್ತರ ಪ್ರದೇಶದಲ್ಲಿ ಜನಿಸಿದರು.

ಹಾರ್ವರ್ಡ್ ವಿಶ್ವವಿದ್ಯಾಲಯದಲ್ಲಿ ಹೈದರಾಬಾದ್‌ನಲ್ಲಿ ಜನಿಸಿದ ಸಾಮಾಜಿಕ ಮನಶ್ಶಾಸ್ತ್ರಜ್ಞ ಬನಾಜಿ, ಸೂಚ್ಯ ಪಕ್ಷಪಾತದ ಕುರಿತು ತನ್ನ ಪ್ರವರ್ತಕ ಕೆಲಸಕ್ಕೆ ಹೆಸರುವಾಸಿಯಾಗಿದ್ದಾರೆ.


ನವದೆಹಲಿಯಲ್ಲಿ ಜನಿಸಿದ ಚೋಪ್ರಾ ಹಾರ್ವರ್ಡ್ ವೈದ್ಯಕೀಯ ಶಾಲೆಯಲ್ಲಿ ಅಂತರಾಷ್ಟ್ರೀಯವಾಗಿ ಗುರುತಿಸಲ್ಪಟ್ಟ ಯಕೃತ್ತಿನ ರೋಗ ತಜ್ಞ ಮತ್ತು ಶಿಕ್ಷಕಿ, ಮುಂಬೈನಲ್ಲಿ ಜನಿಸಿದ ಕೇವಲ್ರಮಣಿ ವರ್ಟೆಕ್ಸ್ ಫಾರ್ಮಾಸ್ಯುಟಿಕಲ್ಸ್ ಮುಖ್ಯಸ್ಥರಾಗಿದ್ದಾರೆ. ಕಳೆದ ವರ್ಷ, ಭಾರತೀಯ ಮೂಲದ ನಾಗರಿಕ ಹಕ್ಕುಗಳ ವಕೀಲೆ ಮಂಜುಷಾ ಪಿ. ಕುಲಕರ್ಣಿ ಮತ್ತು ಯೇಲ್ ವಿಶ್ವವಿದ್ಯಾಲಯದ ಖಗೋಳ ಭೌತಶಾಸ್ತ್ರಜ್ಞೆ ಪ್ರಿಯಂವದ ನಟರಾಜನ್ ಅವರು ಗೌರವಕ್ಕೆ ಪಾತ್ರರಾಗಿದ್ದರು.

ಹಿಂದಿನ ಭಾರತೀಯ ಮೂಲದ ಪುರಸ್ಕೃತರಲ್ಲಿ ನೊಬೆಲ್ ಪ್ರಶಸ್ತಿ ವಿಜೇತ ಅಭಿಜಿತ್ ಬ್ಯಾನರ್ಜಿ, ಸಾರ್ವಜನಿಕ ಆರೋಗ್ಯ ತಜ್ಞೆ ಆಶಿಶ್ ಕುಮಾರ್ ಝಾ, ಅರ್ಥಶಾಸ್ತ್ರಜ್ಞೆ ಗೀತಾ ಗೋಪಿನಾಥ್, ನಾಸಾ ವಿಜ್ಞಾನಿ ಕಮಲೇಶ್ ಲುಲ್ಲಾ, ಮಾಜಿ ಯುಎಸ್ ಸರ್ಜನ್ ಜನರಲ್ ವಿವೇಕ್ ಮೂರ್ತಿ, ಅಡೋಬ್ ಸಿಇಒ ಶಾಂತನು ನಾರಾಯಣ್ ಮತ್ತು ಆಲ್ಫಾಬೆಟ್ ಸಿಇಒ ಸುಂದರ್ ಪಿಚೈ ಸೇರಿದ್ದಾರೆ.

# ಎಸ್‌ಆರ್‌ಆರ್: ರಾಜ್ಯದಲ್ಲಿ ಮತದಾರರ ಹಕ್ಕುಗಳಿಗೆ ಯಾವುದೇ ಧಕ್ಕೆಯಾಗದಂತೆ ಎಚ್ಚರವಿರಲಿ: ಡಿಸಿಎಂ ಪರಮೇಶ್ವರ್

**ಬೆಳಗಾವಿ:** ಎಸ್‌ಐಆರ್ ಕುರಿತು ದೇಶಾದ್ಯಂತ ವಿವಿಧ ಚರ್ಚೆಗಳು ನಡೆದಿದ್ದು, ಅದರ ಸಾಧಕಬಾಧಕಗಳ ಕುರಿತಾಗಿ ಚರ್ಚಿಸಲಾಗಿದೆ. ಇತರ ರಾಜ್ಯಗಳಲ್ಲಿ ಚುನಾವಣಾ ಪ್ರಕ್ರಿಯೆಗಳ ಸಂದರ್ಭದಲ್ಲಿ ಉಂಟಾದ ಸವಾಲುಗಳ ಅನುಭವವನ್ನು ಗಮನದಲ್ಲಿಟ್ಟುಕೊಂಡು, ರಾಜ್ಯದಲ್ಲಿ ಮತದಾರರ ಹಕ್ಕುಗಳಿಗೆ ಯಾವುದೇ ಧಕ್ಕೆಯಾಗದಂತೆ ಅಗತ್ಯ ಮುನ್ನೆಚ್ಚರಿಕೆ ವಹಿಸುವುದು ಅತ್ಯಂತ ಮುಖ್ಯವಾಗಿದೆ ಎಂದು ಡಿಸಿಎಂ ಡಾ. ಜಿ. ಪರಮೇಶ್ವರ್ ತಿಳಿಸಿದರು.

ಇಂದು ಬೆಳಗಾವಿ ಜಿಲ್ಲಾ ಕಾಂಗ್ರೆಸ್ ಕಚೇರಿಗೆ ಭೇಟಿ ನೀಡಿ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರನ್ನು ಉದ್ದೇಶಿಸಿ ಅವರು ಮಾತನಾಡಿದರು. ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿಯೂ ಎಸ್‌ಐಆರ್ ಪ್ರಕ್ರಿಯೆಗಳು ಸಮರ್ಪಕವಾಗಿ ನಡೆಯಬೇಕು. ಬಿಎಲ್‌ಒಗಳು ಮತ್ತು ಸಂಬಂಧಿತ ಅಧಿಕಾರಿಗಳು ಪರಸ್ಪರ ಸಂಪರ್ಕ ಇಟ್ಟುಕೊಂಡು, ಅರ್ಹ ಮತದಾರರ ಹೆಸರು ಅನಗತ್ಯವಾಗಿ ಕೈಬಿಡದಂತೆ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು. ವಸತಿ ಪ್ರಮಾಣಪತ್ರ ನೀಡುವ ಪ್ರಕ್ರಿಯೆಯನ್ನು ಸುಗಮಗೊಳಿಸಲು ಜಿಲ್ಲಾಧಿಕಾರಿಗಳು ಹಾಗೂ ತಹಶೀಲ್ದಾರ್‌ಗಳಿಗೆ ಅಧಿಕಾರ ನೀಡಲಾಗಿದ್ದು, ಇದರಿಂದ ಸಾರ್ವಜನಿಕರಿಗೆ ಆಗುವ ತೊಂದರೆ ಕಡಿಮೆಯಾಗಲಿದೆ ಎಂದು ತಿಳಿಸಿದರು.



ಕೇಂದ್ರದಲ್ಲಿ ಅಧಿಕಾರ ಕಳೆದುಕೊಂಡು 15 ವರ್ಷಗಳ ಅವಧಿಯಲ್ಲಿ ಅನೇಕ ಸವಾಲುಗಳನ್ನು ಎದುರಿಸಿದ್ದೇವೆ. ಕೇಂದ್ರದಿಂದ ಅನುದಾನ ವಿಳಂಬ, ಯೋಜನೆಗಳ ಅನುಷ್ಠಾನದಲ್ಲಿ ತೊಂದರೆ, ಬಡಜನರಿಗೆ ಅಗತ್ಯ ಸೌಲಭ್ಯಗಳನ್ನು ತಲುಪಿಸುವಲ್ಲಿ ಹಲವು ಸಮಸ್ಯೆಗಳನ್ನು ಅನುಭವಿಸಿದ್ದೇವೆ.

ಜೆಜೆಎಂ ಯೋಜನೆ ಹಾಗೂ ನರೇಗಾ ಕಾರ್ಯಕ್ರಮಗಳಿಗೂ ಅಗತ್ಯ ಹಣಕಾಸು ನೆರವು ದೊರೆಯದಿರುವ ಪರಿಸ್ಥಿತಿಗಳನ್ನು ಕಂಡಿದ್ದೇವೆ. ಕೇಂದ್ರ ಸರ್ಕಾರದಿಂದ ಸಿಗದ ಬೆಂಬಲ ಮತ್ತು ಸಹಕಾರದ ಕೊರತೆಯು ಅಭಿವೃದ್ಧಿ ಕಾರ್ಯಗಳ ಮೇಲೆ ಬೀರುವ ಪರಿಣಾಮದ ಬಗೆಗಿನ ಅನುಭವ ನಮಗಿದೆ ಎಂದು ಕೇಂದ್ರದ ಅಸಹಕಾರದ ನಡೆಯ ಬಗ್ಗೆ ಬೇಸರ ವ್ಯಕ್ತಪಡಿಸಿದರು.

ಕಾಂಗ್ರೆಸ್ ಪಕ್ಷ ಬಡವರ ಕಲ್ಯಾಣವನ್ನೇ ಪ್ರಮುಖ ಆದ್ಯತೆಯನ್ನಾಗಿರಿಸಿಕೊಂಡಿದೆ. ನಾವು ಜಾರಿಗೆ ತಂದಿರುವ ಜನಪರ ಯೋಜನೆಗಳು ಹಾಗೂ ಕಾರ್ಯಕ್ರಮಗಳು ನಿರಂತರವಾಗಿ ಮುಂದುವರಿಯಬೇಕಾದರೆ 2028ರಲ್ಲಿಯೂ ಮತ್ತೊಮ್ಮೆ ಜನರ ಆಶೀರ್ವಾದ ನಮಗೆ ಬೇಕು. ಇದೇ ಕಾರಣಕ್ಕಾಗಿ ಎಸ್‌ಐಆರ್ ಪ್ರಕ್ರಿಯೆಯನ್ನು ಗಂಭೀರವಾಗಿ ಪರಿಗಣಿಸಿ, ಯಾವುದೇ ಕಾರಣಕ್ಕೂ ಮತದಾರರ ಹಕ್ಕಿಗೆ ಧಕ್ಕೆಯಾಗದಂತೆ ಎಚ್ಚರಿಕೆ ವಹಿಸಬೇಕು. ಎಲ್ಲಿ ತಪ್ಪುಗಳು ಕಂಡುಬಂದರೂ ಅವುಗಳ ಮೇಲ್ವಿಚಾರಣೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಕೆಪಿಸಿಸಿಗೆ ನೂತನ ಅಧ್ಯಕ್ಷರು ಅಧಿಕಾರ ವಹಿಸಿಕೊಂಡ ಬಳಿಕ ಸ್ವಾಭಾವಿಕವಾಗಿ ಪದಾಧಿಕಾರಿಗಳು ಹಾಗೂ ಕಾರ್ಯನಿರ್ವಾಹಕ ಹುದ್ದೆಗಳಲ್ಲಿ ಬದಲಾವಣೆಗಳು ನಡೆಯುತ್ತವೆ. ಆಯಾ ಜಿಲ್ಲೆಗಳಲ್ಲಿ ಪಕ್ಷಕ್ಕಾಗಿ ಸಮರ್ಪಿತವಾಗಿ ದುಡಿದ, ಅರ್ಹತೆ ಹೊಂದಿರುವ ಕಾರ್ಯಕರ್ತರು ಹಾಗೂ ಅಧಿಕಾರಿಗಳನ್ನು ಗುರುತಿಸಿ ಸೂಕ್ತ ಜವಾಬ್ದಾರಿಗಳನ್ನು ನೀಡಲಾಗುತ್ತದೆ. ಸಚಿವರು, ಶಾಸಕರು ಹಾಗೂ ಜಿಲ್ಲಾಧ್ಯಕ್ಷರೊಂದಿಗೆ ಸಮನ್ವಯ ಸಭೆ ನಡೆಸಿ ಪ್ರಧಾನ ಕಾರ್ಯದರ್ಶಿ ಸೇರಿದಂತೆ ವಿವಿಧ ಹುದ್ದೆಗಳಿಗೆ ಸೂಕ್ತ ಹೆಸರುಗಳ ಪಟ್ಟಿಯನ್ನು ಸಿದ್ಧಪಡಿಸಿ ಸಲ್ಲಿಸಿದರೆ, ಅದನ್ನು ಪರಿಶೀಲಿಸಿ ಅಧ್ಯಕ್ಷರೊಂದಿಗೆ ಚರ್ಚಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು

### ಕಾನಿಪ ಗದಗ ಜಿಲ್ಲಾ ಘಟಕದಿಂದ ರಕ್ತದಾನ ಶಿಬಿರ

# ನಾವೆಲ್ಲರೂ ರಕ್ತದಾನ ಮಾಡಿ ಮತ್ತೊಂದು ಜೀವ ಉಳಿಸಲು ಸಹಾಯ ಮಾಡೋಣ : ರಾಜು ಎಂ. ಹೆಬ್ಬಳ್ಳಿ

**ವಿಜಯಸಾಕ್ಷಿ ಸುದ್ದಿ, ಗದಗ**

ಪತ್ರಿಕಾ ದಿನಾಚರಣೆ ಹಿನ್ನೆಲೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಗದಗ ಜಿಲ್ಲಾ ಘಟಕದಿಂದ ಮೊದಲ ಬಾರಿ ರಕ್ತದಾನ ಶಿಬಿರ ಆಯೋಜನೆ ಮಾಡಲಾಗಿದ್ದು ಇದು ನಮಗೆಲ್ಲಾ ಹೆಮ್ಮೆಯ ವಿಷಯ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಗದಗ ಜಿಲ್ಲಾ ಘಟಕದ ಅಧ್ಯಕ್ಷರಾದ ರಾಜು ಎಂ. ಹೆಬ್ಬಳ್ಳಿ ಹೇಳಿದರು.

ಗದಗ ನಗರದ ಬಸವೇಶ್ವರ ಬ್ಲಡ್ ಬ್ಯಾಂಕಿನಲ್ಲಿ ಪತ್ರಕರ್ತರಿಂದ ಜರುಗಿದ ರಕ್ತದಾನ ಶಿಬಿರ ಉದ್ದೇಶಿಸಿ ಮಾತನಾಡಿದ ಅವರು ಮತ್ತೊಂದು ಜೀವ ಉಳಿಸುವಂತಹ ಕೆಲಸ ನಮ್ಮ ಪತ್ರಿಕಾ ಮಿತ್ರರು ಮಾಡುತ್ತಿರುವುದು ನಮಗೆಲ್ಲಾ ಹೆಮ್ಮೆಯ ವಿಷಯ, ಎಲ್ಲರೂ ರಕ್ತದಾನ ಮಾಡಿ ಮತ್ತೊಂದು ಜೀವ ಉಳಿಸಲು ಸಹಾಯ ಮಾಡೋಣ ಎಂದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರ ಮಾತನಾಡಿ ಪತ್ರಕರ್ತರು ಸೇರಿದಂತೆ ಅನೇಕರು ಅವರ ಕುಟುಂಬಗಳ ಅನಾರೋಗ್ಯ, ಆಪರೇಶನ್'ಗಳಂತಹ ಸಂದರ್ಭಗಳಲ್ಲಿ ರಕ್ತದ ಕೊರತೆ ಅನುಭವಿಸಿದ್ದು ಅದನ್ನೆಲ್ಲಾ ಮನಗಂಡು ಪತ್ರಿಕಾ ದಿನಾಚರಣೆ ಹಿನ್ನೆಲೆ ರಕ್ತದಾನ ಶಿಬಿರ ಹಮ್ಮಿಕೊಂಡಿದ್ದೇವೆ ಎಂದರು.

ಕಾನಿಪ ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯ ಆನಂದಯ್ಯ ವಿರಕ್ತಮಠ ಮಾತನಾಡಿ



ಪತ್ರಕರ್ತರಾದವರು ಬಿಡುವಿಲ್ಲದ ಕಾರ್ಯದೊತ್ತಡದಲ್ಲಿ ಜನಮುಖಿ, ಜನಪರ ವಿಚಾರಗಳಿಂದ ಸುದ್ದಿಯ ಮೂಲಕಸಮಾಜದಶುದ್ಧಿಗೊಳಿಸತಕ್ಕಂತವರು. ಅಂತಹದರ ನಡುವೆಯೂ ಪತ್ರಕರ್ತರಾದವರು ಸಮಾಜಮುಖಿಯಾಗಿ ಹೇಗಿರಬಲ್ಲರು ಎಂದು ಇಂದು ಪತ್ರಿಕಾ ದಿನಾಚರಣೆ ಹಿನ್ನೆಲೆ ರಕ್ತದಾನ ಮಾಡುವ ಮೂಲಕ ಸಮಾಜದೊಂದಿಗೆ ಹೇಗಿದ್ದೇವೆ ಎಂಬುದನ್ನು ತೋರಿಸಲು ಇದೊಂದು ನಿದರ್ಶನ ಎಂದರು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರ, ಜಿಲ್ಲಾ ಉಪಾಧ್ಯಕ್ಷ ಅನಿಲ ತೆಂಬದಮನಿ, ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯ ಸಂತೋಷಕುಮಾರ ಮುರಡಿ, ಸದಸ್ಯ ಪ್ರವೀಣ ಮಾಂತಾ ರಕ್ತದಾನ ಮಾಡಿದರು.

ಈ ಸಂದರ್ಭದಲ್ಲಿ ಕಾನಿಪ ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಅರುಣಕುಮಾರ ಹಿರೇಮಠ, ಕಾರ್ಯದರ್ಶಿಗಳಾದ ಬನೇಶ ಕುಲಕರ್ಣಿ, ಸಂಗಮೇಶ ವ್ಯಾಪಾರಿ, ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯರಾದ ವೆಂಕಟೇಶ ಇಮರಾಪೂರ, ಸಂತೋಷ ಕೊಣ್ಣೂರ, ರುದ್ರಗೌಡ ಪಾಟೀಲ್, ಪತ್ರಕರ್ತರಾದ ಸುರೇಶ್ ಕಡ್ಲಿಮಟ್ಟಿ, ಫಾರೂಖ ಮಕಾಂದಾರ, ಕೆಮರಾಮನ್ ವಿಜಯ ಕಾಗನೂರಮಠ, ಫೋಟೋಗ್ರಾಫರ ವಿನಾಯಕ ಚೌಡಾಪೂರ, ಬಸವೇಶ್ವರ ಬ್ಲಡ್ ಬ್ಯಾಂಕಿನ ಅನಿಲಕುಮಾರ ಹಾಗೂ ಸಿಬ್ಬಂದಿಗಳು ಇದ್ದರು.

## ಮರಾಠಾ ವಿದ್ಯಾವರ್ಧಕ ಸಂಘದಿಂದ ಪ್ರತಿಭಾ ಪುರಸ್ಕಾರ



**ವಿಜಯಸಾಕ್ಷಿ ಸುದ್ದಿ, ಗದಗ**

ಮರಾಠಾ ವಿದ್ಯಾವರ್ಧಕ ಸಂಘ (ರಿ), ಗದಗ–ಬೆಟಗೇರಿ ವತಿಯಿಂದ ಛತ್ರಪತಿ ಶ್ರೀ ಶಿವಾಜಿ ಭವನದಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ಮರಾಠಾ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ನೋಟ್‌ಬುಕ್‌ಗಳನ್ನು ವಿತರಿಸಲಾಯಿತು.

ಸಂಘದ ಅಧ್ಯಕ್ಷ ಅರುಣಕುಮಾರ ಬಿ. ಚವ್ಹಾಣ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮವನ್ನು ಸಮಾಜದ ವಿದ್ಯಾರ್ಥಿನಿಯರ ಪ್ರಾರ್ಥನೆಯೊಂದಿಗೆ ಆರಂಭಿಸಲಾಯಿತು. ದೀಪಾ ನಲವಡೆ ಸ್ವಾಗತಿಸಿದರು. ಮುದ್ದು ಬಿ. ತುಕ್ಕಪ್ಪನವರ ಕಾರ್ಯಕ್ರಮ ನಿರೂಪಿಸಿದರೆ, ಹನಮಂತಪ್ಪ ಎಸ್. ಹೆಬ್ಬಳ್ಳಿ ಪ್ರತಿಭಾ ಪುರಸ್ಕಾರ ಹಾಗೂ ನೋಟ್‌ಬುಕ್ ವಿತರಣೆಯನ್ನು ನೆರವೇರಿಸಿದರು.

ಮುಖ್ಯ ಅತಿಥಿ ಪಾಲ್ಗೊಂಡಿದ್ದ ಎಸ್.ಆರ್. ಘೋರ್ಪಡೆ ಮಾತನಾಡಿ, ಸಮಾಜದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳ ಕೊರತೆಯಿಲ್ಲ. ಆದರೆ, ಉನ್ನತ ಶಿಕ್ಷಣದ ಕುರಿತು ಪಾಲಕರಲ್ಲಿ ಸಮರ್ಪಕ ಮಾಹಿತಿ ಹಾಗೂ ಪ್ರೋತ್ಸಾಹದ ಕೊರತೆಯಿಂದ ಅನೇಕ ವಿದ್ಯಾರ್ಥಿಗಳು ವಿದ್ಯಾಭ್ಯಾಸವನ್ನು ಮಧ್ಯದಲ್ಲೇ ನಿಲ್ಲಿಸುತ್ತಿದ್ದಾರೆ. ಇದರಿಂದ ಸರ್ಕಾರಿ ಸೇವೆ ಸೇರಿದಂತೆ ಉನ್ನತ ಹುದ್ದೆಗಳಲ್ಲಿ ಸಮಾಜದ ಪ್ರತಿನಿಧಿತ್ವ ಕಡಿಮೆಯಾಗಿದೆ. ಪಾಲಕರು ಮಕ್ಕಳಲ್ಲಿ ದೊಡ್ಡ ಕನಸುಗಳನ್ನು ಬೆಳೆಸಿ, ಅವು ನನಸಾಗಲು ಅಗತ್ಯ ಬೆಂಬಲ ನೀಡಬೇಕು ಎಂದು ಕರೆ ನೀಡಿದರು.

ಮೋಹನರಾವ್ ವೈ. ಗ್ವಾರಿ ಸಂಘದ ಮುಂದಿನ ಕಾರ್ಯಚಟುವಟಿಕೆಗಳ ಕುರಿತು ಮಾತನಾಡಿದರು. ಮಹಿಳಾ ಮಂಡಳದ ಅಧ್ಯಕ್ಷೆ ಅಶ್ವಿನಿ ಜಗತಾಪ ಮಹಿಳೆಯರು ಹಾಗೂ ಪಾಲಕರು ಇಂತಹ ಕಾರ್ಯಕ್ರಮಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ಅಗತ್ಯವಿದೆ ಎಂದು ತಿಳಿಸಿದರು.

ಅಧ್ಯಕ್ಷ ಅರುಣಕುಮಾರ ಬಿ. ಚವ್ಹಾಣ ಮಾತನಾಡಿ, ಬಡತನದ ಕಾರಣದಿಂದ ಸಮಾಜದ ಅನೇಕ ವಿದ್ಯಾರ್ಥಿಗಳು ಸರ್ಕಾರದ ವಿವಿಧ ಸೌಲಭ್ಯಗಳಿಂದ ವಂಚಿತರಾಗುತ್ತಿದ್ದಾರೆ.

ಸರ್ಕಾರ ಹಾಗೂ ವಿವಿಧ ಸಂಘ–ಸಂಸ್ಥೆಗಳು ನೀಡುವ ವಿದ್ಯಾರ್ಥಿ ವೇತನ, ಶೈಕ್ಷಣಿಕ ಯೋಜನೆಗಳು ಸೇರಿದಂತೆ ಲಭ್ಯವಿರುವ ಸೌಲಭ್ಯಗಳ ಬಗ್ಗೆ ಪಾಲಕರು ಮಾಹಿತಿ ಪಡೆದು ಮಕ್ಕಳ ಉನ್ನತ ಶಿಕ್ಷಣಕ್ಕೆ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು. ದೀಪಾ ಮಾಡಿಕರ ವಂದಿಸಿದರು.

ಕಾರ್ಯಕ್ರಮದಲ್ಲಿ ಬಸವರಾಜ ಜೆ. ಹುಬ್ಬಳ್ಳಿ, ಸುರೇಶ ಎಸ್. ಬೇಂದ್ರೆ, ನರಸಪ್ಪ ಬಿ. ತುಕ್ಕಪ್ಪನವರ, ಮಾರುತಿ ಆರ್. ಅರಳಿಕಟ್ಟಿ, ಶಿವಾಜಿ ವೈ. ಗ್ವಾರಿ, ಮಂಜು ಎನ್. ಮಾನೆ, ಶಿವಾಜಿರಾವ ಪಾವನ, ಸುಭಾಷ್ ವಿ. ಕದಡಿ, ಮಾರುತಿ ಎಸ್. ಹೆಬ್ಬಳ್ಳಿ, ರಮೇಶ್ ವೈ. ಘೋರ್ಪಡೆ, ಈರಣ್ಣ ಪವಾರ, ಮಾಲಾ ಜಾಧವ, ಶೋಭಾ ಘಾಟಗೆ, ಜ್ಯೋತಿ ಮಾನೆ, ಪದ್ಮಾವತಿ ಸೆಳಕೆ, ಸುರೇಖಾ ಬೇಂದ್ರೆ, ರೇಖಾ ಬೇಂದ್ರೆ ಸೇರಿದಂತೆ ವಿದ್ಯಾರ್ಥಿಗಳು, ಪಾಲಕರು ಹಾಗೂ ಸಮಾಜದ ಮುಖಂಡರು ಉಪಸ್ಥಿತರಿದ್ದರು.

## ಶ್ರೀದತ್ತ ಮಂಗಲ ಭವನ ನಿರ್ಮಾಣಕ್ಕೆ ಸರ್ವರ ಸಂಕಲ್ಪ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ನರೇಗಲ್ಲ ಪಟ್ಟಣದಲ್ಲಿ ನಿರ್ಮಾಣಗೊಳ್ಳಲಿರುವ ಶ್ರೀದತ್ತ ಮಂಗಲ ಭವನ ಕಾಮಗಾರಿಯನ್ನು ಶೀಘ್ರ ಆರಂಭಿಸಲು ಸಾರ್ವಜನಿಕರ ಸಹಕಾರದೊಂದಿಗೆ ಮುಂದುವರಿಯಲು ಪೂರ್ವಭಾವಿ ಸಭೆಯಲ್ಲಿ ನಿರ್ಧರಿಸಲಾಯಿತು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ನಡೆದ ಸಭೆಯಲ್ಲಿ ಗೌರವಾಧ್ಯಕ್ಷ ಡಾ. ಜಿ.ಕೆ. ಕಾಳೆ ಮಾತನಾಡಿ, ಭಕ್ತರ ಸಹಕಾರದಿಂದ ಮಂಗಲ ಭವನ ನಿರ್ಮಾಣ ಕಾರ್ಯ ಯಶಸ್ವಿಯಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಶ್ರೀಧರ ಕುಲಕರ್ಣಿ, ಭಾರತಿಬಾಯಿ ಗ್ರಾಮಪುರೋಹಿತ, ಡಾ. ನಾಗರಾಜ ಗ್ರಾಮಪುರೋಹಿತ ಹಾಗೂ ಶ್ರೀವಲ್ಲಭಭಟ್ಟ ಸದರಜೋಷಿ ಮಂಗಲ ಭವನ ನಿರ್ಮಾಣಕ್ಕೆ ಸರ್ವರೂ ಕೈಜೋಡಿಸುವಂತೆ ಕರೆ ನೀಡಿದರು. ಅಧ್ಯಕ್ಷೀಯ ನುಡಿಗಳನ್ನಾಡಿದ ಶ್ರೀಪಾದಭಟ್ಟ ಜೋಷಿ ಅಗತ್ಯ ಸಲಹೆ–ಸೂಚನೆಗಳನ್ನು ನೀಡಿದರು.

ಕಾರ್ಯಕ್ರಮದಲ್ಲಿ ಶೇಷಗಿರಿ ಕುಲಕರ್ಣಿ, ಡಾ. ಕೃಷ್ಣ ಕಾಳೆ, ಗುರುರಾಜ ಕುಲಕರ್ಣಿ, ಅರ್ಚನಾ ಕುಲಕರ್ಣಿ, ನಿಖಿತಾ ಗ್ರಾಮಪುರೋಹಿತ, ಮಂಜುನಾಥ ಹೆಗಡೆ, ಆನಂದ ಕುಲಕರ್ಣಿ, ಆನಂದ ಕಾಳೆ, ಅರುಣ ಗ್ರಾಮಪುರೋಹಿತ, ನಾಗೇಶಭಟ್ಟ ಗ್ರಾಮಪುರೋಹಿತ, ಅಜಿತ ಕುಲಕರ್ಣಿ, ರಂಗನಾಥ ಕುಲಕರ್ಣಿ, ಪ್ರಶಾಂತ ಗ್ರಾಮಪುರೋಹಿತ, ನಾಗರಾಜ ನಾಡಿಗೇರ, ಬಾಬುರಾವ ಕಾಳೆ, ಕಿರಣ ಕಾಳೆ, ಸಂಧ್ಯಾ ಕುಲಕರ್ಣಿ, ಪದ್ಮಾ ಕುಲಕರ್ಣಿ, ಡಾ. ಸಪ್ನಾ ಕಾಳೆ, ಶ್ವೇತಾ ಕಾಳೆ, ಅನಿತಾ ಗ್ರಾಮಪುರೋಹಿತ, ಜ್ಯೋತಿ ನಾಡಿಗೇರ, ಜ್ಯೋತಿ ಕುಲಕರ್ಣಿ, ಪ್ರಿಯಾ ಕುಲಕರ್ಣಿ ಹಾಗೂ ರಾಜಶ್ರೀ ಕುಲಕರ್ಣಿ ಸೇರಿದಂತೆ ಅನೇಕ ಭಕ್ತರು ಪಾಲ್ಗೊಂಡಿದ್ದರು.

## ಎಸ್.ಐ.ಆರ್. ವರದಿ : ಜೂನ್ 30 ರಂದು 13594 ಎನ್ಯುಮರೇಷನ್ ಫಾರ್ಮ ವಿತರಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್ಐಆರ್)ಪ್ರಕ್ರಿಯೆಯು ಈಗಾಗಲೇ ಪ್ರಾರಂಭವಾಗಿದ್ದು ಬಿ.ಎಲ್.ಓಗಳು ಮನೆ ಮನೆಗೆ ಭೇಟಿ ನೀಡಿ ಎನ್ಯುಮರೇಷನ್ ಫಾರ್ಮಗಳನ್ನು ಮತದಾರರಿಗೆ ವಿತರಿಸುವರು.

ಜಿಲ್ಲೆಯಲ್ಲಿ ಒಟ್ಟು 9,02,947 ಮತದಾರರು ಮತದಾರರ ಪಟ್ಟಿಯಲ್ಲಿದ್ದಾರೆ. 967 ಮತಗಟ್ಟೆಗಳಿವೆ.

ಈ ಪೈಕಿ 96.38 % ಮತದಾರರ ಮ್ಯಾಪಿಂಗ್ ಆಗಿದ್ದು, ಜೂನ್ 30 ರಿಂದ ಬಿ.ಎಲ್.ಓಗಳು ಜುಲೈ 29 ರವೆಗೆ ಮನೆ ಮನೆಗೆ ಭೇಟಿ ನೀಡಿ ಎನ್ಯುಮರೇಷನ್ ಫಾರ್ಮ ವಿತರಿಸಲಿದ್ದಾರೆ.

ಜೂನ್ 30 ರಂದು 13594 ಎನ್ಯುಮರೇಷನ್ ಫಾರ್ಮಗಳನ್ನು ವಿತರಿಸಲಾಗಿದೆ. 643 ಎನ್ಯುಮರೇಷನ್ ಫಾರ್ಮ ಡಿಜಟಲೀಕರಣಗೊಂಡಿವೆ ಎಂದು ಜಿಲ್ಲಾಡಳಿತ ಪ್ರಕಟಣೆಯಲ್ಲಿ ತಿಳಿಸಿದೆ.

## ಸಮರ್ಥ ಫುಡ್ಸ್‌ಗೆ ರಾಜ್ಯ ಮಟ್ಟದ ಅತ್ಯುತ್ತಮ ಸೇವಾ ಸಂಸ್ಥೆ ಪ್ರಶಸ್ತಿ

**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಮುಳಗುಂದ ಪಟ್ಟಣದ ಸಮರ್ಥ ಫುಡ್ಸ್ (ಖಡಕ್ ರೊಟ್ಟಿ ಕೇಂದ್ರ)ಗೆ ಕರ್ನಾಟಕ ಸರಕಾರಿ ನೌಕರರ ಸಂಸ್ಕೃತಿ ಮತ್ತು ಸಾಹಿತ್ಯ ಪರಿಷತ್ತು (ರಿ), ಬೆಂಗಳೂರು ವತಿಯಿಂದ ಅತ್ಯುತ್ತಮ ಸೇವಾ ಸಂಸ್ಥೆ ರಾಜ್ಯ ಮಟ್ಟದ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಧಾರವಾಡದ ಆಲೂರ ವೆಂಕಟರಾವ್ ಸಭಾಭವನದಲ್ಲಿ ನಡೆದ ಸಮಾರಂಭದಲ್ಲಿ ಉತ್ತರ ಕರ್ನಾಟಕದ ಸಾಂಪ್ರದಾಯಿಕ ರೊಟ್ಟಿ ತಯಾರಿಕೆಯ ಮೂಲಕ ಅನೇಕ ಕುಟುಂಬಗಳಿಗೆ ಉದ್ಯೋಗ ಕಲ್ಪಿಸಿ ರಾಜ್ಯಾದ್ಯಂತ ಹೆಸರು ಗಳಿಸಿರುವ ಸೇವೆಯನ್ನು ಗುರುತಿಸಿ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಗುರುಚರಂತಯ್ಯ ಕೊಣ್ಣೂರಹಿರೇಮಠ, ಲೋಸಿ ಸಾಲ್ಡಾನ, ಬಸವರಾಜ ಗುರಿಕಾರ, ಎಲ್.ಐ. ಲಕ್ಕಮ್ಮನವರ, ರಮಾ ಆರ್., ಪರ್ವಿನಬಾನು ಬುಳ್ಳಣ್ಣವರ, ಬಸವರಾಜ ಬಾಗಲ್, ಮಂಜುನಾಥ ಮಟ್ಟಿ ಹಾಗೂ ಗೀತಾ ಪ್ರಧಾನಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.



## ಹಗರಿಬೊಮ್ಮನಹಳ್ಳಿ ಸರ್ಕಾರಿ ಗಂಗಾವತಿ ವೆಂಕೋಬಣ್ಣ ಆಸ್ಪತ್ರೆಯಲ್ಲಿ ರಾಷ್ಟ್ರೀಯ ವೈದ್ಯರ ದಿನಾಚರಣೆ

**ವಿಜಯ ಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದ ಗಂಗಾವತಿ ವೆಂಕೋಬಣ್ಣ ಸರ್ಕಾರಿ ಆಸ್ಪತ್ರೆಯಲ್ಲಿ ರಾಷ್ಟ್ರೀಯ ವೈದ್ಯರ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಆಸ್ಪತ್ರೆಯ ವೈದ್ಯರು ಹಾಗೂ ಸಿಬ್ಬಂದಿಯನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ಕಾರ್ಯಕ್ರಮವನ್ನು ನಾಗಭೂಷಣ ಗದ್ದಿಕೇರಿ ಮತ್ತು ಅವರ ತಂಡದಿಂದ ಹಮ್ಮಿಕೊಳ್ಳಲಾಗಿತ್ತು

ಕಾರ್ಯಕ್ರಮವನ್ನು ಸಿಬ್ಬಂದಿ ನರ್ಸ್ ಪ್ರಾರ್ಥನಾ ಗೀತಾ ಅವರು ನಿರೂಪಿಸಿದರು. ಶರತ್ ಹಿರೇಮಠ್ ಅವರು ಸ್ವಾಗತಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಆಸ್ಪತ್ರೆಯ ಮುಖ್ಯ ವೈದ್ಯಾಧಿಕಾರಿ ಡಾ. ಶಿವಕುಮಾರ್ ಹಾಗೂ ಎಲ್ಲಾ ವೈದ್ಯರು ಜ್ಯೋತಿ ಬೆಳಗಿಸುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದರು.

ಮುಖ್ಯ ವೈದ್ಯಾಧಿಕಾರಿ ಡಾ. ಶಿವಕುಮಾರ್ ಮಾತನಾಡಿ, ವೈದ್ಯಕೀಯ ಸೇವೆ ಇನ್ನಷ್ಟು ಪರಿಣಾಮಕಾರಿಯಾಗಲು ಸಾರ್ವಜನಿಕರ ಸಹಕಾರ ಅತ್ಯಗತ್ಯವಾಗಿದೆ ಎಂದು ತಿಳಿಸಿದರು. ವೈದ್ಯರು ಎದುರಿಸುತ್ತಿರುವ ಇಂದಿನ ಪರಿಸ್ಥಿತಿಯ ಕುರಿತು ವಿವರಿಸಿ, ಹಗರಿಬೊಮ್ಮನಹಳ್ಳಿ ಸರ್ಕಾರಿ ಆಸ್ಪತ್ರೆಯನ್ನು ಇನ್ನಷ್ಟು ಉನ್ನತೀಕರಿಸುವ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟರು.

ಡಾ. ತಿಪ್ಪೇಸ್ವಾಮಿ ಅವರು ಮಾತನಾಡಿ, ನಮ್ಮ ಆಸ್ಪತ್ರೆಯಲ್ಲಿ ಪ್ರತಿದಿನ ಸುಮಾರು 750 ರಿಂದ 800 ಹೊರರೋಗಿಗಳಿಗೆ (OPD) ಚಿಕಿತ್ಸೆ ನೀಡಲಾಗುತ್ತಿದ್ದು, ಇದು ಜಿಲ್ಲೆಯಲ್ಲಿಯೇ ಅತ್ಯಧಿಕ ಸಂಖ್ಯೆಯಾಗಿದೆ. ಆಸ್ಪತ್ರೆಯ ವೈದ್ಯರು ಹಾಗೂ ಸಿಬ್ಬಂದಿ ಉತ್ತಮ ಸೇವೆ ಸಲ್ಲಿಸುತ್ತಿದ್ದಾರೆ ಎಂದು ತಿಳಿಸಿದರು.

ಡಾ. ಅಚ್ಯುತ್ ಅವರು ತಮ್ಮ ಹಿಂದಿನ ಸೇವಾ



ಅನುಭವಗಳನ್ನು ಹಂಚಿಕೊಂಡು, ವೈದ್ಯಕೀಯ ವೃತ್ತಿಯ ಮಹತ್ವ ಹಾಗೂ ಸೇವಾ ಮನೋಭಾವದ ಕುರಿತು ಮಾತನಾಡಿದರು.

ನಾಗಭೂಷಣ ಗದ್ದಿಕೇರಿ ಅವರು ಮಾತನಾಡಿ, "ವೈದ್ಯರ ದಿನಾಚರಣೆ ವೈದ್ಯರ ಸೇವೆಯನ್ನು ಸ್ಮರಿಸುವ ವಿಶೇಷ ದಿನವಾಗಿದೆ. ಸಮಾಜದ ಪರವಾಗಿ ವೈದ್ಯರಿಗೆ ನಮ್ಮ ಸಂಪೂರ್ಣ ಬೆಂಬಲ ಸದಾ ಇರುತ್ತದೆ" ಎಂದು ಹೇಳಿದರು. ಸತ್ಯದೊಂದಿಗೆ ಬದುಕಿದರೆ ದೇವರು ನಮ್ಮನ್ನು ಕಾಯುತ್ತಾನೆ ಎಂದರು

ಕಾರ್ಯಕ್ರಮದಲ್ಲಿ ಡಾ. ಶಿವಕುಮಾರ್ (CMO), ಡಾ. ತಿಪ್ಪೇಸ್ವಾಮಿ, ಡಾ. ಅಚ್ಯುತ್, ಡಾ. ಸಿದ್ಧಾರ್ಥ್, ಡಾ. ರಾಜೇಶ್ ನಾಯಕ್, ಡಾ. ಮಾಲತೇಶ್, ಡಾ. ಶಿವಕುಮಾರ್, ಡಾ. ಲಕ್ಷ್ಮೀದೇವಿ, ಡಾ. ಭಾರತಿ ಹಾಗೂ ಡಾ. ಅಂಜುಮ್ ಮುನಿಸಾ ಸೇರಿದಂತೆ ಎಲ್ಲಾ ವೈದ್ಯರು ಭಾಗವಹಿಸಿದ್ದರು.

ಇದಲ್ಲದೆ ಆಸ್ಪತ್ರೆಯ ಎಲ್ಲಾ ಸಿಬ್ಬಂದಿ ನರ್ಸ್‌ಗಳು ಹಾಗೂ ಆಸ್ಪತ್ರೆಯ ಸಿಬ್ಬಂದಿ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಸಾರ್ವಜನಿಕರ ಪರವಾಗಿ ಸೋಮನಗೌಡ್ರು, ದುಗ–'ಣ್ಣ ಸರ್, ಕೊಟ್ರಪ್ಪ ಸರ್, ರಮೇಶ್, ಮಂಜುನಾಥ್, ರಘುನಂದನ್, ವೀರುಪಾಕ್ಷಿ, ಶ್ರೀನಿವಾಸ್ ಹಂಪಪಟ್ಟಣ ಹಾಗೂ ರಾಘವೇಂದ್ರ ಸರ್ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಿ ವೈದ್ಯರನ್ನು ಅಭಿನಂದಿಸಿದರು.

ಎಲ್ಲಾ ವೈದ್ಯರಿಗೆ ಸನ್ಮಾನ ಸಲ್ಲಿಸಲಾಯಿತು , ರಾಷ್ಟ್ರೀಯ ವೈದ್ಯರ ದಿನಾಚರಣೆಯನ್ನು ಯಶಸ್ವಿಯಾಗಿ ಆಚರಿಸಲಾಯಿತು.

## ರೋಟರಿ ಕ್ಲಬ್‌ದಲ್ಲಿ ಯಶಸ್ವಿ ರಕ್ತದಾನ ಶಿಬಿರ




**ವಿಜಯಸಾಕ್ಷಿ ಸುದ್ದಿ, ಗದಗ,**

ಗದಗ–ಬೆಟಗೇರಿ ರೋಟರಿ ಕ್ಲಬ್, ಬಸವೇಶ್ವರ ಬ್ಲಡ್ ಸೆಂಟರ್ ಹಾಗೂ ಗದಗ–ಬೆಟಗೇರಿ ಇನ್ನರ್‌ವ್ಹೀಲ್ ಕ್ಲಬ್ ಸಂಯುಕ್ತ ಆಶ್ರಯದಲ್ಲಿ ಬುಧವಾರ ರೋಟರಿ ಐಕೇರ್ ಸೆಂಟರ್‌ದಲ್ಲಿ ಏರ್ಪಡಿಸಿದ್ದ ರಕ್ತದಾನ ಶಿಬಿರವು ಯಶಸ್ವಿಯಾಗಿ ಜರುಗಿತು.

ಗದಗ–ಬೆಟಗೇರಿ ರೋಟರಿ ಕ್ಲಬ್‌ನ 2026–27ನೇ ಸಾಲಿನ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಹಾಗೂ ವೈದ್ಯರ ದಿನಾಚರಣೆಯ ಅಂಗವಾಗಿ ಹಮ್ಮಿಕೊಂಡಿದ್ದ ಈ ರಕ್ತದಾನ ಶಿಬಿರದಲ್ಲಿ ಸುಮಾರು 10 ಜನಗಿಂತಲೂ ಹೆಚ್ಚು ರಕ್ತದಾನಿಗಳು ಸ್ವಯಂ ಪ್ರೇರಣೆಯಿಂದ ಪಾಲ್ಗೊಂಡು ಸಮಾಜಮುಖಿ ಹಾಗೂ ಮಾನವೀಯ ಕಾರ್ಯಕ್ಕೆ ಕೈಜೋಡಿಸಿದರು.

ಶಿಬಿರದಲ್ಲಿ ರೋಟರಿ 3170ದ ರೋಟರಿ ಸಹಾಯಕ ಜಿಲ್ಲಾ ಗವರ್ನರ್ ಶ್ರೀಧರಗೌಡ ಎ.ಧರ್ಮಾಯತ, ಗದಗ–ಬೆಟಗೇರಿ ರೋಟರಿ ಕ್ಲಬ್‌ನ ನೂತನ ಅಧ್ಯಕ್ಷ ಡಾ.ಪ್ರದೀಪ ಉಗಲಾಟ, ಕಾರ್ಯದರ್ಶಿ ಅಕ್ಷಯ್ ಶೆಟ್ಟಿ, ನಿಕಟಪೂರ್ವ ಅಧ್ಯಕ್ಷ ಡಾ.ಆರ್.ಜಿ.ಗಚ್ಚಿನಮಠ, ಹಾಗೂ ನಿಕಟಪೂರ್ವ ಕಾರ್ಯದರ್ಶಿ ಸುರೇಶ ಕುಂಬಾರ, ಶ್ರೀಧರ ಸುಲ್ತಾನಪೂರ, ಡಾ.ಆರ್.ಬಿ.ಉಪ್ಪಿನ, ವಿಶ್ವನಾಥ ಯಳಮಲಿ ಗದಗ–ಬೆಟಗೇರಿ ಇನ್ನರ್‌ವ್ಹೀಲ್ ಕ್ಲಬ್‌ನ ಮಂಜುಳಾ ಅಕ್ಕಿ, ಅಶ್ವಿನಿ ಜಗತಾಪ, ಶಿವಲೀಲಾ ಅಕ್ಕಿ, ಸುಶೀಲಾ ಕೋಟಿ, ನೀಲಾಂಭಿಕಾ ಉಗಲಾಟ, ಸವಿತಾ ಧರ್ಮಾಯತ, ಸಂಧ್ಯಾ ಕೋಟಿ, ಶಿಲ್ಪಾ ಅಕ್ಕಿ, ಪುಷ್ಪಾ ಭಂಡಾರಿ, ಮೀನಾಕ್ಷಿ ಕೊರವನವರ, ಸುವರ್ಣಾ ವಸ್ತ್ರದ, ವೀಣಾ ಕಾವೇರಿ, ರೋಟ್ರ್ಯಾಕ್ಟ ಕ್ಲಬ್‌ನ ಸನ್ಮತಿ, ಸುಮಾ, ಭಾನುಪ್ರಕಾಶ, ಶ್ರುಜನ್ ಮುಂತಾದವರಿದ್ದರು.

108 ಕುಂಭಗಳಿಂದ ಜಲಾಭಿಷೇಕ; ಮಳೆ-ಬೆಳೆ ಸಮೃದ್ಧಿಗಾಗಿ ವಿಶೇಷ ಪೂಜೆ

# ವರುಣನ ಕೃಪೆಗೆ ಗ್ರಾಮದೇವಿಯ ಮೊರೆ





**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಕಳೆದ 20-25 ದಿನಗಳಿಂದ ಸಮರ್ಪಕ ಮಳೆಯಾಗದೆ ರೈತರು ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆಯಲ್ಲಿ, ತಾಲೂಕಿನ ಅಡರಕಟ್ಟಿ ಗ್ರಾಮದಲ್ಲಿ ಗ್ರಾಮ ದೇವತೆಗೆ 108 ಕುಂಭಗಳಿಂದ ಜಲಾಭಿಷೇಕ ನೆರವೇರಿಸಿ ಉತ್ತಮ ಮಳೆಗಾಗಿ ವಿಶೇಷ ಪ್ರಾರ್ಥನೆ ಸಲ್ಲಿಸಲಾಯಿತು.

ಕಾರ ಹುಣ್ಣಿಮೆ ಅಂಗವಾಗಿ ಮುಂಜಾನೆಯಿಂದಲೇ ಶ್ರೀ ರೇಣುಕಾ ಮಂದಿರದಿಂದ ನೂರಾರು ಮಹಿಳೆಯರು ಪೂರ್ಣಕುಂಭಗಳನ್ನು ಹೊತ್ತು ವಾದ್ಯಗೋಷ್ಠಿಯೊಂದಿಗೆ ಮೆರವಣಿಗೆಯಲ್ಲಿ ಗ್ರಾಮದೇವಿ ದೇವಸ್ಥಾನಕ್ಕೆ ಆಗಮಿಸಿದರು. ಬಳಿಕ ದೇವಿಯ ಉತ್ಸವ ಮೂರ್ತಿಗೆ 108 ಕುಂಭಗಳ ಜಲಾಭಿಷೇಕ ನೆರವೇರಿಸಿ, ವಿಶೇಷ ಪೂಜೆ ಮತ್ತು ಅಲಂಕಾರ ಮಾಡಲಾಯಿತು. ನಂತರ ಮಹಿಳೆಯರಿಗೆ ಉಡಿ ತುಂಬುವ ಕಾರ್ಯಕ್ರಮವೂ ನಡೆಯಿತು.

ಜಾಗೃತ ದೇವತೆಯಾದ ಗ್ರಾಮದೇವಿಯನ್ನು ಭಕ್ತಿಯಿಂದ ಪ್ರಾರ್ಥಿಸಿದರೆ ಉತ್ತಮ ಮಳೆಯಾಗುತ್ತದೆ ಎಂಬ ನಂಬಿಕೆಯ ಹಿನ್ನೆಲೆಯಲ್ಲಿ ನೂರಾರು ಮಹಿಳೆಯರು, ಪುರುಷರು, ಯುವಕರು ಹಾಗೂ ಮಕ್ಕಳು ಕಾರ್ಯಕ್ರಮದಲ್ಲಿ ಭಾಗವಹಿಸಿ ವರುಣ ದೇವನ ಕೃಪೆಗೆ ಪ್ರಾರ್ಥಿಸಿದರು.

ಬಳಿಕ ಗ್ರಾಮದ ಭಜನಾ ತಂಡಗಳು ದೇವಸ್ಥಾನದ ಆವರಣದಲ್ಲಿ ಸಂಜೆಯವರೆಗೂ ದೇವಿಯ ಸ್ತುತಿಗೀತೆಗಳನ್ನು ಹಾಡಿ ಭಜನೆ ಸಲ್ಲಿಸಿದವು. ಮಧ್ಯೆ ತುಂತುರು ಮಳೆ ಸುರಿದರೂ ಭಜನೆ ನಿರಂತರವಾಗಿ ಮುಂದುವರಿಯಿತು.

ಗ್ರಾಮದ ಮುಖಂಡರು ಹಾಗೂ ಹಿರಿಯರ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ಭಕ್ತರಿಗೆ ಮಹಾಪ್ರಸಾದ ವಿತರಿಸಲಾಯಿತು. ಉತ್ತಮ ಮಳೆಯಾಗಿ ನಾಡು ಹಸನಾಗಲಿ, ರೈತರ ಬದುಕು ಸಮೃದ್ಧಿಯಾಗಲಿ ಎಂದು ಗ್ರಾಮಸ್ಥರು ಪ್ರಾರ್ಥಿಸಿದರು.

ಸ್ಕೂಲ್ ಚಂದನದಲ್ಲಿ ನಾರ್ತ್‌ಸೌತ್ ಫೌಂಡೇಶನ್ ಸಂವಾದ

# ವಿದ್ಯಾರ್ಥಿಗಳ ಜ್ಞಾನಕ್ಕೆ ವಿಶ್ವದರ್ಜೆಯ ಸ್ಪರ್ಶ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ವಿದ್ಯಾರ್ಥಿಗಳ ಜ್ಞಾನಮಟ್ಟವನ್ನು ವಿಶ್ವದರ್ಜೆಗೆ ಹೆಚ್ಚಿಸುವ ಉದ್ದೇಶದಿಂದ ನಾರ್ತ್‌ಸೌತ್ ಫೌಂಡೇಶನ್‌ನ ಸ್ಕೂಲ್ ರಿಲೇಶನ್ಸ್ ಹಾಗೂ ಡೇಟಾ ಅನಾಲಿಟಿಕ್ಸ್ ಮ್ಯಾನೇಜರ್ ಕೃಪಕರ್ ಪೂಟ್ಲಪಲ್ಲಿ ಅವರು ಸೋಮವಾರ ಲಕ್ಷ್ಮೇಶ್ವರದ ಪ್ರತಿಷ್ಠಿತ ಸ್ಕೂಲ್ ಚಂದನಕ್ಕೆ ಭೇಟಿ ನೀಡಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು.

ಶಾಲೆಯ ಸಿ.ಎನ್.ಆರ್. ರಾವ್ ಹಾಲ್ ಆಫ್ ಸೈನ್ಸ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ಮಹತ್ವ, ವಿದ್ಯಾರ್ಥಿಗಳ ಸಾಮರ್ಥ್ಯ ವೃದ್ಧಿ ಹಾಗೂ ಜ್ಞಾನಮಟ್ಟವನ್ನು ಹೆಚ್ಚಿಸಿಕೊಳ್ಳುವ ಕುರಿತು ಮಾಹಿತಿ ನೀಡಿದರು.

ಗ್ರಾಮೀಣ ಭಾಗದ ವಿದ್ಯಾರ್ಥಿಗಳು ರಾಷ್ಟ್ರೀಯ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಸ್ಪರ್ಧಿಸಲು ತಂತ್ರಜ್ಞಾನ ಕೌಶಲ್ಯ, ಮೂಲಭೂತ ಇಂಗ್ಲಿಷ್ ಮತ್ತು ಗಣಿತ ಜ್ಞಾನ ಅತ್ಯಗತ್ಯವಾಗಿದೆ. ಬಾಯಿಪಾಠಕ್ಕೆ ಸೀಮಿತವಾಗದೆ ವಿಷಯವನ್ನು ಅರ್ಥೈಸಿಕೊಂಡು ಕಲಿಯುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಅವರು ಸಲಹೆ ನೀಡಿದರು.

ವಿದೇಶಗಳಲ್ಲಿನ ಶಿಕ್ಷಣ ವ್ಯವಸ್ಥೆ, ಉನ್ನತ ಶಿಕ್ಷಣದ ಅವಕಾಶಗಳು ಹಾಗೂ ಭವಿಷ್ಯದ ಕೌಶಲ್ಯಗಳ ಕುರಿತು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ, ಆತ್ಮವಿಶ್ವಾಸದಿಂದ ಗುರಿ ಸಾಧಿಸುವಂತೆ ಪ್ರೇರೇಪಿಸಿದರು.

ಈ ಸಂದರ್ಭದಲ್ಲಿ ಶಾಲೆಯ ಸಂಸ್ಥಾಪಕರು, ಪ್ರಾಂಶುಪಾಲರು, ಶಿಕ್ಷಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕಾರಹುಣ್ಣಿಮೆ ಸಂಭ್ರಮದಲ್ಲಿ ಕರಿ ಹರಿದ ಬಿಳಿ ಎತ್ತು



**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಕಾರಹುಣ್ಣಿಮೆ ಅಂಗವಾಗಿ ಮುಳಗುಂದ ಪಟ್ಟಣದಲ್ಲಿ ರೈತರು ಸಂಪ್ರದಾಯಬದ್ಧವಾಗಿ ಎತ್ತುಗಳನ್ನು ಅಲಂಕರಿಸಿ ಪೂಜಿಸಿ, ವಿಶೇಷ ಆಚರಣೆಗಳ ಮೂಲಕ ಹಬ್ಬವನ್ನು ಸಂಭ್ರಮದಿಂದ ಆಚರಿಸಿದರು.


ಮುಂಗಾರು ಬಿತ್ತನೆ ಮುಗಿದ ಬಳಿಕ ರೈತರ ಮೊದಲ ಹಬ್ಬವೆಂದೇ ಕರೆಯಲಾಗುವ ಕಾರಹುಣ್ಣಿಮೆ ಹಿನ್ನೆಲೆಯಲ್ಲಿ ಎತ್ತುಗಳ ನಾಲಿಗೆಗೆ ಅರಿಶಿಣ ಹಾಗೂ ಉಪ್ಪಿನ ಮಿಶ್ರಣ ಹಚ್ಚಿ ಸ್ವಚ್ಛಗೊಳಿಸಲಾಯಿತು. ಜವಾರಿ ತತ್ತಿಗಳ ಗೊಟ್ಟ, ಬಣ್ಣಬಣ್ಣದ ಅಲಂಕಾರಗಳಿಂದ ಎತ್ತುಗಳನ್ನು ಶೃಂಗರಿಸಿ ವಿಶೇಷ ಪೂಜೆ ಸಲ್ಲಿಸಲಾಯಿತು.

ಸಂಜೆ ಪಟ್ಟಣದ ಐದು ಮನೆತನಗಳ ಎತ್ತುಗಳನ್ನು ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಲಾಯಿತು. ಬಳಿಕ ಐದು ಎತ್ತುಗಳನ್ನು ಸಾಲಾಗಿ ನಿಲ್ಲಿಸಿ ಸಂಪ್ರದಾಯದಂತೆ 'ಕರಿ ಹರಿಯುವ' ಆಚರಣೆ ನೆರವೇರಿಸಲಾಯಿತು. ಈ ವೇಳೆ ಹಕಾರಿಯವರ ಮನೆತನದ ಬಿಳಿ ಎತ್ತು ಕರಿ ಹರಿಯುವ ಮೂಲಕ ಎಲ್ಲರ ಗಮನ ಸೆಳೆಯಿತು.

ವಾದ್ಯಮೇಳಗಳೊಂದಿಗೆ ನಡೆದ ಮೆರವಣಿಗೆಯಲ್ಲಿ ರೈತರು, ಗ್ರಾಮಸ್ಥರು ಹಾಗೂ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರಹುಣ್ಣಿಮೆ ಹಬ್ಬದ ಸಂಭ್ರಮವನ್ನು ಹೆಚ್ಚಿಸಿದರು.

# ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಗೆ ಸಂಬಂಧಿಸಿದಂತೆ ವೇಳಾ ಪಟ್ಟಿ ಪ್ರಕಟ

**ವಿಜಯಸಾಕ್ಷಿ ಸುದ್ದಿ, ಗದಗ**



ಭಾರತ ಚುನಾವಣಾ ಆಯೋಗ ನವದೆಹಲಿ ರವರು ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆ-2026 (SIR) ನೇದ್ದಕ್ಕೆ ಸಂಬಂಧಿಸಿದಂತೆ ಈಗಾಗಲೇ ವೇಳಾಪಟ್ಟಿಯನ್ನು ಹೊರಡಿಸಿರುತ್ತಾರೆ. ಜೂನ್ 30 ರಿಂದ ಜುಲೈ 29 ರವರೆಗೆ ಬಿ.ಎಲ್.ಓಗಳು ಮನೆ ಮನೆಗೆ ಭೇಟಿ ನೀಡಿ ಸಮೀಕ್ಷೆ ಹಾಗೂ ಪರಿಶೀಲನೆ ನಡೆಸಲಿದ್ದಾರೆ. ಜುಲೈ 29 ರೊಳಗೆ ಮತಗಟ್ಟೆಗಳ ಪುನರ್ ವಿಂಗಡಣೆ ಕಾರ್ಯ ಜರುಗಲಿದೆ. ತದನಂತರ ಅಗಸ್ಟ 5 ರಂದು ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುವುದು. ಅಗಸ್ಟ 5 ರಿಂದ ಸೆಪ್ಟೆಂಬರ್ 4 ರವರೆಗೆ ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಬಹುದಾಗಿದೆ. ಅಗಸ್ಟ 5ರಿಂದ ಅಕ್ಟೋಬರ್ 3 ರವೆಗೆ ಹಕ್ಕು ಮತ್ತು ಆಕ್ಷೇಪಣೆಗಳನ್ನು ವಿಲೇವಾರಿಗೊಳಿಸಲಾಗುವುದು. ಅಕ್ಟೋಬರ್ 7 ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಾಗುವುದು.

ಚುನಾವಣಾ ಆಯೋಗದ ವೇಳಾಪಟ್ಟಿಯಂತೆ ದಿನಾಂಕ:30-06-2026 ರಿಂದ ಗದಗ ಜಿಲ್ಲೆಯ 4 ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಬರುವ ಎಲ್ಲ ಮತಗಟ್ಟೆಗಳ ಬೂತ್‌ಮಟ್ಟದ ಅಧಿಕಾರಿಗಳು (BLO) ರವರು ಇಟಿಣಟಜಡಿಚಿಣುಟಿ ಈಂಡಿಥ ನೊಂದಿಗೆ ಮತದಾರರ ಮನೆ ಮನೆಗೆ ಭೇಟಿ ನೀಡುವ ಮತ್ತು ಮಾಹಿತಿ ಸಂಗ್ರಹಿಸುವ ಕಾರ್ಯವನ್ನು ಕೈಗೊಂಡಿರುತ್ತಾರೆ. ಸದರಿ ನಮೂನೆಗಳಲ್ಲಿ ಮತದಾರರಿಂದ ಅವರ ಮಾಹಿತಿಯನ್ನು ಪಡೆದು ಚುನಾವಣಾ ಆಯೋಗದ ಅಧೀಕೃತ ಆಪ್‌ನಲ್ಲಿ ದಾಖಲಿಸಲು ಕ್ರಮ ಕೈಗೊಳ್ಳಲಿದ್ದಾರೆ. ಜಿಲ್ಲೆಯಾದ್ಯಂತ ಮತದಾರರಿಗೆ ಅನುಕೂಲವಾಗಲು ವಿಧಾನಸಭೆ ಕ್ಷೇತ್ರಗಳಲ್ಲಿ ಮತದಾರರಿಗೆ ಸಂಬಂಧಿಸಿದ ಮತಗಟ್ಟೆಗಳಲ್ಲಿ Voter Facilitation Centre ಗಳನ್ನು ಸ್ಥಾಪಿಸಲಾಗಿದೆ ಮತ್ತು ಮತಗಟ್ಟೆ ಅಧಿಕಾರಿಗಳಿಗೆ ಸಂಬಂಧಿಸಿದಂತೆ ಗ್ರಾಮೀಣ ಭಾಗದ ಪ್ರದೇಶಗಳಲ್ಲಿ ಗ್ರಾಮ ಪಂಚಾಯತಗಳಲ್ಲಿ ಹಾಗೂ ನಗರ ಪ್ರದೇಶದಲ್ಲಿ ತಹಶೀಲ್ದಾರ ಕಾರ್ಯಾಲಯ, ತಾಲೂಕ ಪಂಚಾಯತಗಳಲ್ಲಿ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ನಗರಸಭೆ/ಪುರಸಭೆ/ಪಟ್ಟಣ ಪಂಚಾಯತ ಗಳಲ್ಲಿ BLO Facilitation Centre ಸ್ಥಾಪಿಸಲಾಗಿದೆ. ಜಿಲ್ಲಾ ಮಟ್ಟದಲ್ಲಿ ಮತದಾರರ ಸಹಾಯವಾಣಿ ಕೇಂದ್ರವನ್ನು ಸ್ಥಾಪಿಸಲಾಗಿದ್ದು, ಸಾರ್ವಜನಿಕರು ಬೆಳಿಗ್ಗೆ 10-00 ಗಂಟೆಯಿಂದ ಸಂಜೆ 6-00 ಗಂಟೆಯ ವರೆಗೆ ಸರ್ಕಾರಿ ಕೆಲಸದ ದಿನಗಳಂದು (ರಜಾ ದಿನಗಳನ್ನು ಹೊರತುಪಡಿಸಿ) 1950 ಸಂಖ್ಯೆಗೆ ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬಹುದು. 1950 ಜಿಲ್ಲಾ ಸಹಾಯವಾಣಿ ಕೇಂದ್ರದ ನೋಡಲ್ ಅಧಿಕಾರಿಯಾಗಿ ಮೆಹಬೂಬ ತುಂಬರಮಟ್ಟಿ, ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಗದಗ (ಮೊ ನಂ: 8867598154) ಇವರನ್ನು ನೇಮಕ ಮಾಡಲಾಗಿದೆ. ಮತದಾರರ ನೊಂದಣಾಧಿಕಾರಿಯಾಗಿ 65-ಶಿರಹಟ್ಟಿ ವಿಧಾನಸಭಾ ಕ್ಷೇತ್ರಕ್ಕೆ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ ಅವರನ್ನು, 66-ಗದಗ ವಿದಾನ ಸಭಾ ಕ್ಷೇತ್ರಕ್ಕೆ ಉಪವಿಭಾಗಾಧಿಕಾರಿ ಗಂಗಪ್ಪ ಎಂ ಅವರನ್ನು , 67-ರೋಣ ವಿಧಾನ ಸಭಾ ಕ್ಷೇತ್ರಕ್ಕೆ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ ಅವರನ್ನು ಹಾಗೂ 68-ನರಗುಂದ ವಿಧಾನ ಸಭಾ ಕ್ಷೇತ್ರಕ್ಕೆ ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕ ಶಿವನಗೌಡ ಪಾಟೀಲ ಅವರನ್ನು ನೇಮಕ ಮಾಡಲಾಗಿದೆ. ತಹಶೀಲ್ದಾರರುಗಳು ಸಹಾಯಕ ಮತದಾರರ ನೊಂದಣಾಧಿಕಾರಿಗಳನ್ನಾಗಿ ನೇಮಕ ಮಾಡಲಾಗಿದೆ.

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ -2026 ರ ನಿಮಿತ್ತ ಭಾರತ ಚುನಾವಣಾ ಆಯೋಗದಿಂದ ವಿಪುಲ ಬನ್ಸಲ್ ಸರ್ಕಾರದ ಕಾರ್ಯದರ್ಶಿ ಇವರನ್ನು ಮತದಾರರ ಪಟ್ಟಿ ವೀಕ್ಷಕರನ್ನಾಗಿ ಗದಗ ಜಿಲ್ಲೆಗೆ ನೇಮಿಸಲಾಗಿದೆ.

ಗದಗ ಜಿಲ್ಲೆಗೆ ಸಂಬಂಧಿಸಿದಂತೆ ಜಿ.ಪಂ. ಮುಖ್ಯ ಯೋಜನಾಧಿಕಾರಿ ಎ.ಎ.ಕಂಬಾಳಿಮಠ ಅವರನ್ನು ಮತದಾರರ ಪಟ್ಟಿ ವಿಶೇಷ ಸಮಗ್ರಹ ಪರಿಷ್ಕರಣೆ-2026 ರ ಜಿಲ್ಲಾ ನೋಡಲ್ ಅಧಿಕಾರಿಯೆಂದು ನೇಮಕ ಮಾಡಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳಾದ

ಆರ್.ಡಿ.ಪಿ.ಆರ್.ವಿಶ್ವವಿದ್ಯಾಲಯದಲ್ಲಿ ವನಮಹೋತ್ಸವ

# 100ಕ್ಕೂ ಹೆಚ್ಚು ಸಸಿಗಳ ನೆಡುವ ಮೂಲಕ ಪರಿಸರ ಸಂರಕ್ಷಣೆಯ ಸಂಕಲ್ಪ




**ವಿಜಯಸಾಕ್ಷಿ ಸುದ್ದಿ, ಗದಗ**

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (ನರೇಗಾ) ಯ ಸವಿ ನೆನಪನ್ನು ಸ್ಮರಿಸುವ ಹಾಗೂ ವಿಬಿ-ಜಿ ರಾಮ್ (ಜಿ) ಯೋಜನೆಯ ಆರಂಭವನ್ನು ಅರ್ಥ ಪೂರ್ಣವಾಗಿ ಗುರುತಿಸುವ ಹಿನ್ನೆಲೆ ನರೇಗಾ ನೌಕರರ ಕ್ಷೇಮಾಭಿವೃದ್ಧಿ ಸಂಘ, ಗದಗ ಜಿಲ್ಲಾ ಘಟಕದ ವತಿಯಿಂದ ಬುಧವಾರ ನಗರದ ಆರ್.ಡಿ.ಪಿ.ಆರ್. ವಿಶ್ವವಿದ್ಯಾಲಯ ಆವರಣದಲ್ಲಿ ವನಮಹೋತ್ಸವ ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಕಾರ್ಯಕ್ರಮಕ್ಕೆ ಸಂಘದ ಗೌರವಾಧ್ಯಕ್ಷರಾದ ಶ್ರೀ ಸಿದ್ದಲಿಂಗೇಶ ಪಾಟೀಲ ಅವರು ಸಸಿ ನೆಡುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಪ್ರಕೃತಿ ಮತ್ತು ಪರಿಸರ ಸಂರಕ್ಷಣೆ ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ. ಒಂದು ಮರ ನೂರು ಜನರಿಗೆ ನೆರಳನ್ನು ನೀಡುವುದಲ್ಲದೆ, ಮುಂದಿನ ಪೀಳಿಗೆಗೆ ಆರೋಗ್ಯಕರ ಪರಿಸರವನ್ನು ನಿರ್ಮಿಸುವ ಶಕ್ತಿಯನ್ನು ಹೊಂದಿದೆ. ಆದ್ದರಿಂದ ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಕನಿಷ್ಠ ಒಂದು ಸಸಿಯಾದರೂ ನೆಟ್ಟು ಅದನ್ನು ಮರವಾಗಿ ಬೆಳೆಸುವ ಸಂಕಲ್ಪ ಮಾಡಬೇಕು ಎಂದು ಅವರು ಹೇಳಿದರು.

ಸಂಘದ ಜಿಲ್ಲಾ ಅಧ್ಯಕ್ಷರಾದ ಸುರೇಶ ಬಾಳಿಕಾಯಿ ಮಾತನಾಡಿ ನರೇಗಾ ಯೋಜನೆಯು ಗ್ರಾಮೀಣಾಭಿವೃದ್ಧಿ, ಜಲಸಂರಕ್ಷಣೆ, ಹಸಿರು ಪರಿಸರ ನಿರ್ಮಾಣ ಹಾಗೂ ಗ್ರಾಮೀಣ ಜನರ ಬದುಕಿನಲ್ಲಿ ಮಹತ್ವದ ಬದಲಾವಣೆ ತರಲು ಪ್ರಮುಖ ಪಾತ್ರ ವಹಿಸಿದೆ. ಹೊಸ ರೂಪದಲ್ಲಿ ಆರಂಭವಾಗುತ್ತಿರುವ ವಿಬಿ-ಜಿ ರಾಮ್ (ಜಿ) ಯೋಜನೆಯೂ ಗ್ರಾಮೀಣ ಅಭಿವೃದ್ಧಿಗೆ ಮತ್ತಷ್ಟು ವೇಗ ನೀಡಲಿ ಎಂಬ ಆಶಯವನ್ನು ಅವರು ವ್ಯಕ್ತಪಡಿಸಿದರು.


ಕಾರ್ಯಕ್ರಮದಲ್ಲಿ ಸಂಘದ ಸದಸ್ಯರೆಲ್ಲರೂ ಸೇರಿ 100ಕ್ಕೂ ಹೆಚ್ಚು ವಿವಿಧ ಜಾತಿಯ ಸಸಿಗಳನ್ನು ನೆಟ್ಟು, ಅವುಗಳ ಸಂರಕ್ಷಣೆ ಮತ್ತು ಪೋಷಣೆಯ ಜವಾಬ್ದಾರಿಯನ್ನು ವಹಿಸುವ ಸಂಕಲ್ಪ ಮಾಡಿದ್ದು ಇತರರಿಗೆ ಮಾದರಿ ಆಗಿದೆ. ಸಸಿ ನೆಡುವುದರ ಜೊತೆಗೆ ಅವುಗಳನ್ನು ಸಂರಕ್ಷಿಸುವುದೇ ನಿಜವಾದ ಪರಿಸರ ಸೇವೆ ನೆರವೇರಿಸಿದರು.

ಹೊಸ ಜಿಲ್ಲಾ ಪದಾಧಿಕಾರಿಗಳ ನೇಮಕದ ನಂತರ ನಡೆದ ಮೊದಲ ಸಂಘಟನಾ ಕಾರ್ಯಕ್ರಮ ಇದಾಗಿದ್ದು, ಗದಗ ಜಿಲ್ಲೆಯ ವಿವಿಧ ತಾಲೂಕುಗಳಿಂದ ಆಗಮಿಸಿದ್ದ ನರೇಗಾ ನೌಕರರು ಉತ್ಸಾಹದಿಂದ ಪಾಲ್ಗೊಂಡರು. ಸಂಘದ ಸದಸ್ಯರ ನಡುವೆ ಪರಸ್ಪರ ಸಹಕಾರ, ಸಂಘಟನೆಯ ಬಲವರ್ಧನೆ ಹಾಗೂ ನೌಕರರ ಹಿತಾಸಕ್ತಿಗೆ ಸಂಬಂಧಿಸಿದ ವಿಷಯಗಳ ಕುರಿತು ಈ ಸಂದರ್ಭದಲ್ಲಿ ಚರ್ಚೆ ನಡೆಯಿತು..

ಕಾರ್ಯಕ್ರಮದಲ್ಲಿ ಪರಿಸರ ಸಂರಕ್ಷಣೆಯೊಂದಿಗೆ ಸಮಾಜಮುಖಿ ಕಾರ್ಯಗಳಲ್ಲಿ ಸಂಘದ ಪಾತ್ರವನ್ನು ಮತ್ತಷ್ಟು ವಿಸ್ತರಿಸುವ ಸಂಕಲ್ಪ ವ್ಯಕ್ತವಾಯಿತು. ಭವಿಷ್ಯದಲ್ಲಿಯೂ ಜಿಲ್ಲೆಯ ವಿವಿಧ ತಾಲೂಕಿನಲ್ಲಿ ಇಂತಹ ಜನಜಾಗೃತಿ ಹಾಗೂ ಪರಿಸರ ಸ್ನೇಹಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಸಂಘ ನಿರ್ಧರಿಸಿದೆ ಎಂದು ಎಲ್ಲರಿಂದಲೂ ಅಭಿಪ್ರಾಯ ವ್ಯಕ್ತವಾಯಿತು..

ದೆಹಲಿ-ಮುಂಬೈ ಎಕ್ಸ್‌ಪ್ರೆಸ್‌ವೇಯಲ್ಲಿ ಖಾಸಗಿ ಬಸ್‌ಗೆ ಬೆಂಕಿ

# 7 ಮಂದಿ ಸಾವು, 22 ಜನರಿಗೆ ಗಾಯ



**ಜೈಪುರ:** ರಾಜಸ್ಥಾನದ ದೌಸಾ ಜಿಲ್ಲೆಯ ದೆಹಲಿ-ಮುಂಬೈ ಎಕ್ಸ್‌ಪ್ರೆಸ್‌ವೇಯಲ್ಲಿ ಬುಧವಾರ ಬೆಳಗಿನ ಜಾವ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಪ್ರಯಾಣಿಕರ ಬಸ್‌ಗೆ ಬೆಂಕಿ ಹೊತ್ತಿಕೊಂಡ ಪರಿಣಾಮ ಏಳು ಮಂದಿ ಸಾವನ್ನಪ್ಪಿದ್ದಾರೆ. ಘಟನೆಯಲ್ಲಿ ಕನಿಷ್ಠ 22 ಪ್ರಯಾಣಿಕರು ಗಾಯಗೊಂಡಿದ್ದಾರೆ ಎಂದು ವರದಿಯಾಗಿದೆ. ಸುಮಾರು 37 ಪ್ರಯಾಣಿಕರನ್ನು ಹೊತ್ತೊಯ್ಯುತ್ತಿದ್ದ ಬಸ್ ಹರಿದ್ವಾರದಿಂದ ಇಂದೋರ್‌ಗೆ ಪ್ರಯಾಣಿಸುತ್ತಿದ್ದಾಗ ಬೆಳಗಿನ ಜಾವ 2:30 ರ ಸುಮಾರಿಗೆ ಬೆಂಕಿ ಹೊತ್ತಿಕೊಂಡಿತು. ಬೆಂಕಿಗೆ ನಿಖರವಾದ ಕಾರಣ ಇನ್ನೂ ಅಧಿಕೃತವಾಗಿ ದೃಢಪಟ್ಟಿಲ್ಲ.

ಅಪಘಾತದಲ್ಲಿ ಏಳು ಜನರು ಸಾವನ್ನಪ್ಪಿದ್ದಾರೆ, ಗಾಯಾಳುಗಳನ್ನು ಚಿಕಿತ್ಸೆಗಾಗಿ ಹತ್ತಿರದ ಆಸ್ಪತ್ರೆಗಳಿಗೆ ಸಾಗಿಸಲಾಗಿದೆ. ಘಟನೆ ನಡೆದ ಕೂಡಲೇ ಪೊಲೀಸರು, ಅಗ್ನಿಶಾಮಕ ದಳ ಮತ್ತು ತುರ್ತು ಪ್ರತಿಕ್ರಿಯೆ ತಂಡಗಳು ಸ್ಥಳಕ್ಕೆ ಧಾವಿಸಿ ರಕ್ಷಣಾ ಕಾರ್ಯಾಚರಣೆ ನಡೆಸಿದವು. ಕಾರ್ಯಾಚರಣೆಯ ಮೇಲ್ವಿಚಾರಣೆಗಾಗಿ ದೌಸಾ ಪೊಲೀಸ್ ವರಿಷ್ಠಾಧಿಕಾರಿ ಪಿಯೂಷ್ ದೀಕ್ಷಿತ್ ಅಪಘಾತ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಕಳೆದ ಕೆಲ ದಿನಗಳ ಹಿಂದೆ ಶಿವಮೊಗ್ಗ- ಉಡುಪಿ ಗಡಿಯ ಹುಲಿಕಲ್ (ಬಾಳೆಬರೇ) ಘಾಟಿಯಲ್ಲಿ ಖಾಸಗಿ ಬಸ್‌ಗೆ ಬೆಂಕಿ ಬಿದ್ದು, ಸಂಪೂರ್ಣ ಸುಟ್ಟು ಕರಕಲಾಗಿತ್ತು. ಆದೃಷ್ಟವಶಾತ್, ಬಸ್‌ನಲ್ಲಿದ್ದ ಎಲ್ಲಾ ಪ್ರಯಾಣಿಕರು ಮತ್ತು ಸಿಬ್ಬಂದಿ ಅಪಾಯದಿಂದ ಪಾರಾಗಿದ್ದರು. ಶ್ರೀ ದುರ್ಗಾಂಬಾ ಎಂಬ ಖಾಸಗಿ ಬಸ್ ಘಾಟಿಯಿಂದ ಕುಂದಾಪುರ ಕಡೆಗೆ ಪ್ರಯಾಣಿಸುತ್ತಿತ್ತು. ಈ ವೇಳೆ ಬೆಂಕಿ ಹೊತ್ತಿಕೊಂಡಿರುವುದು ಗೊತ್ತಾಗುತ್ತಿದ್ದಂತೆ ಬಸ್ಸಿನಲ್ಲಿದ್ದವರೆಲ್ಲರೂ ತಕ್ಷಣವೇ ಹೊರಗಡೆ ಬಂದಿದ್ದಾರೆ. ಘಟನೆಯಲ್ಲಿ ಯಾವುದೇ ಪ್ರಾಣಹಾನಿ ಅಥವಾ ಗಾಯಗಳಾಗಿಲ್ಲ. ಬೆಂಕಿ ಕಾಣಿಸಿಕೊಳ್ಳುತ್ತಿದ್ದಂತಯೇ ಸ್ಥಳಕ್ಕೆ ಹೊಸನಗರ ಅಗ್ನಿಶಾಮಕ ದಳದ ಸಿಬ್ಬಂದಿ ಆಗಮಿಸಿ ಬೆಂಕಿ ನಂದಿಸುವ ಕೆಲಸ ಮಾಡಿದ್ದಾರೆ. ಬಸ್?ನಲ್ಲಿನ ತಾಂತ್ರಿಕ ಸಮಸ್ಯೆಯಿಂದ ಬೆಂಕಿ ತಗುಲಿರಬಹುದು ಎಂದು ಶಂಕಿಸಲಾಗಿದೆ. ಘಟನೆಯ ಕುರಿತು ನಗರ ಪೊಲೀಸ್ ಠಾಣೆಯ ಸಿಬ್ಬಂದಿ ತನಿಖೆ ನಡೆಸುತ್ತಿದ್ದಾರೆ. ಘಟನೆಯಿಂದ ಘಾಟಿಯಲ್ಲಿ ಕೆಲಕಾಲ ಸಂಚಾರಕ್ಕೆ ತಡೆ ಉಂಟಾಗಿತ್ತು.

ಇತ್ತೀಚೆಗೆ ಹಾಸನದಲ್ಲೂ ಇಂತಹದ್ದೇ ಘಟನೆ ಸಂಭವಿಸಿತ್ತು. ಮಂಗಳೂರಿನಿಂದ ಬೆಂಗಳೂರಿಗೆ ತೆರಳುತ್ತಿದ್ದ ಖಾಸಗಿ ಸ್ಲೀಪರ್ ಬಸ್‌ನ ಟೈರ್ ಸ್ಫೋಟಗೊಂಡು ಏಕಾಏಕಿ ಬೆಂಕಿ ಹೊತ್ತಿಕೊಂಡ ಘಟನೆ ಹಾಸನ ಜಿಲ್ಲೆಯ ಶಾಂತಿಗ್ರಾಮ ಬಳಿಯ ರಾಷ್ಟ್ರೀಯ ಹೆದ್ದಾರಿಯಲ್ಲಿ ಸಂಭವಿಸಿತ್ತು. ಪ್ರಯಾಣಿಕರೊಬ್ಬರ ಸಮಯಪ್ರಜ್ಞೆಯಿಂದ ಬಸ್‌ನಲ್ಲಿದ್ದ 36 ಪ್ರಯಾಣಿಕರು ಪ್ರಾಣಾಪಾಯದಿಂದ ಪಾರಾಗಿದ್ದರು.

ಅಂತಾರಾಷ್ಟ್ರೀಯ ವೈದ್ಯರ ದಿನಾಚರಣೆ ಅಂಗವಾಗಿ ಖ್ಯಾತ ವೈದ್ಯ

# ಡಾ.ಬಂಡ್ರಿ ವಿಶ್ವನಾಥ್ ಅವರಿಗೆ ದಲಿತ ಸಂಘರ್ಷ ಸಮಿತಿಯಿಂದ ಗೌರವ ಸನ್ಮಾನ

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದ ಅಂತಾರಾಷ್ಟ್ರೀಯ ವೈದ್ಯರ ದಿನಾಚರಣೆಯ ಅಂಗವಾಗಿ ಹಗರಿಬೊಮ್ಮನಹಳ್ಳಿಯ ಹೆಸರಾಂತ ವೈದ್ಯರಾದ ಡಾ. ಬಂಡ್ರಿ ವಿಶ್ವನಾಥ್ ಅವರಿಗೆ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಪ್ರೊ. ಬಿ. ಕೃಷ್ಣಪ್ಪ ಸ್ಥಾಪಿತ - 47/74-75) ಹಗರಿಬೊಮ್ಮನಹಳ್ಳಿ ತಾಲೂಕು ಸಮಿತಿಯ ವತಿಯಿಂದ ಗೌರವ ಸನ್ಮಾನ ಸಲ್ಲಿಸಲಾಯಿತು.



ತಾಲೂಕು ಸಮಿತಿ ಅಧ್ಯಕ್ಷರಾದ ಪರಶುರಾಮ್ ಹೆಗ್ಡಳ್ ಅವರ ನೇತೃತ್ವದಲ್ಲಿ ಸಮಿತಿಯ ಎಲ್ಲಾ ಪದಾಧಿಕಾರಿಗಳು ಡಾ. ಬಂಡ್ರಿ ವಿಶ್ವನಾಥ್ ಅವರ ಆಸ್ಪತ್ರೆಗೆ ಭೇಟಿ ನೀಡಿ, ಹೂಗುಚ್ಛ ನೀಡಿ ಶಾಲು ಹೊದಿಸಿ ಆತ್ಮೀಯವಾಗಿ ಅಭಿನಂದಿಸಿದರು. ವೈದ್ಯರ ಸಮಾಜಮುಖಿ ಸೇವೆಯನ್ನು ಕೊಂಡಾಡಿ, ಅವರ ಆರೋಗ್ಯ, ಆಯುಷ್ಯ ಮತ್ತು ನಿರಂತರ ಸೇವೆಗೆ ಶುಭ ಹಾರೈಸಿದರು.

"ವೈದ್ಯೋ ನಾರಾಯಣೋ ಹರಿ" ಎಂಬ ನುಡಿಯಂತೆ ವೈದ್ಯರು ಭೂಮಿಯ ಮೇಲಿನ ದೇವರ ಪ್ರತಿರೂಪರಾಗಿದ್ದಾರೆ. ಆ ಮಾತಿಗೆ ಜೀವಂತ ಉದಾಹರಣೆಯಾಗಿ ಡಾ. ಬಂಡ್ರಿ ವಿಶ್ವನಾಥ್ ಅವರು ಹಲವು ವರ್ಷಗಳಿಂದ ಹಗರಿಬೊಮ್ಮನಹಳ್ಳಿ ತಾಲೂಕಿನ ಜನರಿಗೆ ನಿಸ್ವಾರ್ಥ ವೈದ್ಯಕೀಯ ಸೇವೆ ಸಲ್ಲಿಸುತ್ತಿದ್ದಾರೆ.

ಅವರ ಆಸ್ಪತ್ರೆಯ ಬಾಗಿಲು ತಟ್ಟುವ ಪ್ರತಿಯೊಬ್ಬ ರೋಗಿಗೂ ಮೊದಲಿಗೆ ಧೈರ್ಯ ತುಂಬುವ ಮಾತುಗಳ ಮೂಲಕ ಆತ್ಮಸ್ಥೈರ್ಯ ನೀಡುವುದು, ನಂತರ ಸೂಕ್ತ ಚಿಕಿತ್ಸೆಯನ್ನು ಒದಗಿಸುವುದು ಅವರ ವಿಶೇಷ ಗುಣವಾಗಿದೆ ಎಂದು ಪದಾಧಿಕಾರಿಗಳು ಮೆಚ್ಚುಗೆ ವ್ಯಕ್ತಪಡಿಸಿದರು.

ಪ್ರತಿನಿತ್ಯ ನೂರಾರು ಸಂಖ್ಯೆಯಲ್ಲಿ ಆಸ್ಪತ್ರೆಗೆ ಆಗಮಿಸುವ ಅನಾರೋಗ್ಯ ಪೀಡಿತರಿಗೆ ಯಾವುದೇ ಬೇಧಭಾವವಿಲ್ಲದೆ, ಶಾಂತ, ಸೌಮ್ಯ ಹಾಗೂ ಮಾನವೀಯ ಮನೋಭಾವದಿಂದ ಚಿಕಿತ್ಸೆ ನೀಡುತ್ತಿರುವ ಡಾ. ವಿಶ್ವನಾಥ್ ಅವರು ತಾಲೂಕಿನ ಜನರ ವಿಶ್ವಾಸವನ್ನು ಗಳಿಸಿರುವ ಅಪರೂಪದ ವೈದ್ಯರಾಗಿದ್ದಾರೆ. ಅವರ ಸರಳತೆ, ಸೇವಾ ಮನೋಭಾವ ಹಾಗೂ ರೋಗಿಗಳೊಂದಿಗೆ ತೋರುವ ಆತ್ಮೀಯತೆ ಅವರನ್ನು ಜನಮನದ ವೈದ್ಯರನ್ನಾಗಿ ರೂಪಿಸಿದೆ ಎಂದು ಸಮಿತಿಯ ಮುಖಂಡರು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ,ಮಾತನಾಡಿದ ಅಧ್ಯಕ್ಷ ಪರಶುರಾಮ್ ಹೆಗ್ಡಳ್, "ಸಮಾಜದಲ್ಲಿ ವೈದ್ಯರ ಸೇವೆ ಅತ್ಯಂತ ಅಮೂಲ್ಯವಾದದ್ದು. ಅನಾರೋಗ್ಯದಿಂದ ಬಳಲುವ ಜನರಿಗೆ ಹೊಸ ಜೀವನ ನೀಡುವ ವೈದ್ಯರು ನಿಜವಾದ ಮಾನವತಾವಾದಿಗಳು. ಡಾ.ಬಂಡ್ರಿ ವಿಶ್ವನಾಥ್ ಅವರು ತಮ್ಮ ಸೇವಾ ಮನೋಭಾವದಿಂದ ಸಾವಿರಾರು ಕುಟುಂಬಗಳ ಆಶಾಕಿರಣವಾಗಿದ್ದಾರೆ. ದೇವರು ಅವರಿಗೆ ಉತ್ತಮ ಆರೋಗ್ಯ, ದೀರ್ಘಾಯುಷ್ಯ ನೀಡಿ ಇನ್ನಷ್ಟು ವರ್ಷಗಳ ಕಾಲ ಜನಸೇವೆ ಮಾಡುವ ಶಕ್ತಿ ನೀಡಲಿ" ಎಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ತಾಲೂಕು ದಲಿತ ಸಂಘರ್ಷ ಸಮಿತಿಯ ಸಂಘಟನಾ ಸಂಚಾಲಕರು ಇದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka